ಸಂಪುಟ : 10 ಸಂಚಿಕೆ: 307 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 23 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 307 Pages : 4+2 Price : 3.00 Friday January 23 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ದೆಹಲಿ ಗಣರಾಜ್ಯೋತ್ಸವ ಸ್ತಬ್ಧಚಿತ್ರ-2026ಕ್ಕೆ ರಾಜ್ಯದಿಂದ 'ಸಿರಿಧಾನ್ಯದಿಂದ ಮೈಕ್ರೋಚಿಪ್‌ವರೆಗೆ' ಸ್ತಬ್ಧಚಿತ್ರ ಅಂತಿಮ

# 'ಭಾರತ ಪರ್ವ'ದಲ್ಲಿ ಕರ್ನಾಟಕದ ಪ್ರದರ್ಶನ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತವನ್ನು ಆತ್ಮನಿರ್ಭರ ರಾಷ್ಟ್ರವನ್ನಾಗಿಸುವ ದಿಶೆಯಲ್ಲಿ ಕರ್ನಾಟಕದಂತಹ ಸ್ವಾವಲಂಬಿ ರಾಜ್ಯಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕೃಷಿಯಿಂದ ಕೈಗಾರಿಕೆವರೆಗೆ ಹಾಗೂ ಆಧುನಿಕ ತಂತ್ರಜ್ಞಾನದ ಬಳಕೆಯಲ್ಲಿ ನಮ್ಮ ರಾಜ್ಯ ಮುಂಚೂಣಿಯಲ್ಲಿದೆ. ಈ ಪಯಣವನ್ನು ಸಂಕೇತಿಸುವಂತೆ, ಸಿರಿಧಾನ್ಯದಿಂದ ಮೈಕ್ರೋಚಿಪ್‌ವರೆಗೆ (ಮಿಲ್ಲೆಟ್ ಟು ಮೈಕ್ರೋಚಿಪ್) ಎನ್ನುವ ಸ್ತಬ್ಧಚಿತ್ರವನ್ನು 2026ರ ಜನವರಿ 26ರಂದು ನವದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವದ ಅಂಗವಾಗಿ ಕೆಂಪು ಕೋಟೆಯಲ್ಲಿ ಆಯೋಜಿಸುವ ಭಾರತ ಪರ್ವದಲ್ಲಿ ಕರ್ನಾಟಕವು ಪ್ರದರ್ಶಿಸುತ್ತಿದೆ.

ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನ ಮತ್ತು ಭಾರತ ಪರ್ವದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟ್ಯಪೂರ್ಣ ಸ್ತಬ್ಧಚಿತ್ರಗಳ ಮೂಲಕವೇ ದೇಶದ ಗಮನ ಸೆಳೆಯುತ್ತಿದ್ದು, ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲುಗಳನ್ನು ಸ್ಥಾಪಿಸುತ್ತಲೇ ಸಾಗಿದೆ. ಈ ಬಾರಿ ಕೃಷಿ, ಶಿಕ್ಷಣ, ವಿಜ್ಞಾನ, ಉನ್ನತ ತಂತ್ರಜ್ಞಾನ ಹಾಗೂ ಮೈಕ್ರೋಚಿಪ್‌ಗಳ ಉತ್ಪಾದನೆಯಲ್ಲಿ ಸಾಧಿಸಿರುವ ಸಮತೋಲನಯುತ ಪ್ರಗತಿಯನ್ನು ಸ್ತಬ್ಧಚಿತ್ರದಲ್ಲಿ ತೋರಿಸಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ತಿಳಿಸಿದ್ದಾರೆ.

> ಸ್ತಬ್ಧಚಿತ್ರದ ಮುಂಭಾಗದಲ್ಲಿ ಉದಯಿಸುತ್ತಿರುವ ಸೂರ್ಯ, ದೊಡ್ಡ ಮಡಿಕೆಗಳಲ್ಲಿ ವಿವಿಧ ಸಿರಿಧಾನ್ಯಗಳು, ಫಸಲನ್ನು ಎತ್ತಿಹಿಡಿದಿರುವ ರೈತ, ಮಧ್ಯ ಭಾಗದಲ್ಲಿ ತಿರುಗುತ್ತಿರುವ ಅಣುವಿನ ಮಾಲಿಕ್ಯೂಲ್‌ಗಳ ಮಾದರಿ ತಂತ್ರಜ್ಞಾನ ಪ್ರಗತಿಯನ್ನು ಸೂಚಿಸುತ್ತದೆ. ಇಕ್ಕೆಲಗಳಲ್ಲಿ ಬಾಹ್ಯಾಕಾಶ ಕ್ಷೇತ್ರವನ್ನು ಪ್ರತಿನಿಧಿಸುವ ರಾಕೆಟ್ ಮತ್ತು ವಿಜ್ಞಾನಿ, ಟೆಲಿಮೆಡಿಸಿನ್ ಮೂಲಕ ಮಾರ್ಗದರ್ಶನ ನೀಡುತ್ತಿರುವ ವೈದ್ಯೆ ಹಾಗೂ ಕೃಷಿಭೂಮಿಯಲ್ಲಿ ಡ್ರೋನ್ ಬಳಸುತ್ತಿರುವ ಮಹಿಳೆಯು ವಿಜ್ಞಾನ, ಆರೋಗ್ಯ ಮತ್ತು ಆಧುನಿಕ ಕೃಷಿಯ ಸಮನ್ವಯವನ್ನು ತೋರಿಸುತ್ತದೆ. ಇಡೀ ಸ್ತಬ್ಧಚಿತ್ರದ ಆಕರ್ಷಣೆಯ ಕೇಂದ್ರಬಿಂದುವಾಗಿ ಕೊನೆಯಲ್ಲಿ ಮಿನುಗುತ್ತಿರುವ ಮೈಕ್ರೋಚಿಪ್ ಹಾಗೂ ಬಂಗಾರದ ಬಣ್ಣದ ಸರ್ಕ್ಯೂಟ್‌ಗಳ ಮಧ್ಯೆ ರೋಬೋಟ್‌ನ ಮುಖವನ್ನು ಸಾಂಕೇತಿಕವಾಗಿ ಚಿತ್ರಿಸಲಾಗಿದೆ.

ಸಿರಿಧಾನ್ಯಗಳ ಉತ್ಪಾದನೆ ಮತ್ತು ಪೌಷ್ಟಿಕ ಆಹಾರದ ಬಳಕೆಯನ್ನು ಉತ್ತೇಜಿಸುವಲ್ಲಿ ಕರ್ನಾಟಕವು ದೇಶದ ಪ್ರಮುಖ ರಾಜ್ಯಗಳಲ್ಲಿ ಒಂದಾಗಿದೆ. ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಬೆಂಗಳೂರು ಜಾಗತಿಕವಾಗಿ ಗಮನ ಸೆಳೆದಿದೆ. ಮೈಕ್ರೋಚಿಪ್, ಎಲೆಕ್ಟ್ರಾನಿಕ್ಸ್ ಹಾಗೂ ಸೆಮಿಕಂಡಕ್ಟರ್ ವಲಯಗಳಲ್ಲಿನ ಆವಿಷ್ಕಾರಗಳು ಕರ್ನಾಟಕವನ್ನು ಶ್ರೇಷ್ಠ ತಂತ್ರಜ್ಞಾನ ಕೇಂದ್ರವಾಗಿಸಿದೆ. ಇವೆಲ್ಲವೂ ಈ ಬಾರಿ ಸ್ತಬ್ಧಚಿತ್ರದಲ್ಲಿ ಮೇಳೈಸಿವೆ.

ದೆಹಲಿಯ ಗಣರಾಜ್ಯೋತ್ಸವದ ಸ್ತಬ್ಧಚಿತ್ರದ ವಿಷಯದ ಆಯ್ಕೆ, ವಿನ್ಯಾಸ, ಕೇಂದ್ರ ಸರ್ಕಾರ ರಕ್ಷಣಾ ಸಚಿವಾಲಯದಲ್ಲಿ ಅದರ ಅನುಮೋದನೆ, ನಿರ್ಮಾಣ, ಪಾಲ್ಗೊಳ್ಳುವಿಕೆ ಹೀಗೆ ಎಲ್ಲಾ ಹಂತಗಳಲ್ಲೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೇ ಸಕ್ರಿಯವಾಗಿ ಪಾಲ್ಗೊಳ್ಳುತ್ತದೆ. ಅಲ್ಲದೆ, ಇಲಾಖೆಯು ಕಳೆದ 16 ವರ್ಷಗಳಿಂದ ನಿರಂತರವಾಗಿ ಗಣರಾಜ್ಯೋತ್ಸವದ ಪಥಸಂಚಲನ ಮತ್ತು ಭಾರತ ಪರ್ವದ ಪ್ರದರ್ಶನದಲ್ಲಿ (2024 ಮತ್ತು 2026ರಲ್ಲಿ) ಪಾಲ್ಗೊಳ್ಳುತ್ತಿದೆ.




> ಸ್ತಬ್ಧಚಿತ್ರಕ್ಕಾಗಿ ಪ್ರಶಸ್ತಿ ಪಡೆದುಕೊಳ್ಳುವುದಕ್ಕಿಂತಲೂ ಪಥಸಂಚಲನ ಮತ್ತು ಪ್ರದರ್ಶನದಲ್ಲಿ ಭಾಗವಹಿಸುವುದೇ ಪ್ರತಿಷ್ಠೆಯ ಸಂಕೇತವಾಗಿದೆ. ಇಂತಹ ಕಠಿಣ ಪರೀಕ್ಷೆಯಲ್ಲಿ ಕರ್ನಾಟಕವು 16 ಬಾರಿ ಭಾಗವಹಿಸಿ, ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದೆ. ಒಂದೇ ಸ್ತಬ್ಧಚಿತ್ರಕ್ಕಾಗಿ ಮೂರು ಪ್ರಶಸ್ತಿಗಳನ್ನು ಪಡೆದ ಅಪರೂಪದ ಸಾಧನೆಯನ್ನು ನಮ್ಮ ರಾಜ್ಯವು ಮಾಡಿದೆ ಎನ್ನುವುದು ಹೆಮ್ಮೆಯ ಸಂಗತಿ ಎಂದು ಹೇಮಂತ್ ಎಂ.ನಿಂಬಾಳ್ಕರ್ ತಿಳಿಸಿದ್ದಾರೆ.

ಈ ಬಾರಿ ಮೊದಲ ಸಭೆಯಲ್ಲಿಯೇ ಸಿರಿಧಾನ್ಯದಿಂದ ಮೈಕ್ರೋಚಿಪ್‌ವರೆಗೆ ಎಂಬ ವಿಷಯವನ್ನು ಸಮಿತಿಯು ಅಂತಿಮಗೊಳಿಸಿದ್ದು, ಅದಕ್ಕನುಗುಣವಾಗಿ ಮಣ್ಣಿನಲ್ಲಿ ಸಿರಿಧಾನ್ಯಗಳನ್ನು ಬೆಳೆಸಿದ ದೇಶೀಯ ಜ್ಞಾನದಿಂದ ಮೈಕ್ರೋಚಿಪ್‌ಗಳನ್ನು ಉತ್ಪಾದಿಸುವ ಸೂಕ್ಷ್ಮತೆಯನ್ನು ಈ ಸ್ತಬ್ಧಚಿತ್ರ ಮನಮುಟ್ಟುವಂತೆ ಕಟ್ಟಿಕೊಡುತ್ತದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಬಿ.ಬಿ. ಕಾವೇರಿ ಅವರ ಸಲಹೆ-ಸೂಚನೆಗಳು ಸ್ತಬ್ಧಚಿತ್ರದ ಕೆಲಸವನ್ನು ಸುಗಮವಾಗಿಸಿತ್ತು ಎಂದು ವಾರ್ತಾ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

## ವಿಶೇಷ ನೋಂದಣಿ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್‌ಧನ್‌ಯೋಜನೆ ಹಾಗೂ National Pension Scheme for the Traders and self Employed Persons (NPS-Traders) ಯೋಜನೆಗಳಡಿ ಅಸಂಘಟಿತ ವಲಯದ ಕಾರ್ಮಿಕರನ್ನು, ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳನ್ನು ನೋಂದಾಯಿಸಲು ಜನವರಿ 15ರಿಂದ ಮಾರ್ಚ್ 15ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

18ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಈ ಯೋಜನೆಯಡಿ ನೋಂದಾಯಿ ಸಬಹುದಾಗಿದೆ. ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ 55 ರೂ.ನಿಂದ 200 ರೂ.ವರೆಗೆ ವಂತಿಗೆ ಪಾವತಿಸಬೇಕು. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಗೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಸದರಿ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. 60 ವರ್ಷ ಪೂರ್ಣಗೊಂಡ ನಂತರ ಮಾಸಿಕ 3 ಸಾವಿರ ರೂ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ.

ಸದರಿ ಯೋಜನೆಯಡಿ ನರೇಗಾ ಕಾರ್ಮಿಕರು, ಖಊಉ ಸದಸ್ಯರು, ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಮಿಕರು, ಬಿಸಿ ಊಟದ ಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಬೀದಿ ಬದಿ ವ್ಯಾಪಾರಿಗಳು, ಗೃಹ ಕಾರ್ಮಿಕರು, ಮೀನುಗಾರರು, ಇನ್ನಿತರೆ ಅಸಂಘಟಿತ ವಲಯಗಳ ಕಾರ್ಮಿಕರು ಹಾಗೂ ವ್ಯಾಪಾರಿಗಳು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಹಾಗೂ ಮೊದಲ ತಿಂಗಳ ವಂತಿಗೆಯೊಂದಿಗೆ ಸಮೀಪದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿಯಾಗಿ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಗದಗ ಕಾರ್ಮಿಕ ಅಧಿಕಾರಿಗಳ ಕಛೇರಿ, ಕಾರ್ಮಿಕ ನಿರೀಕ್ಷಕರ ಕಛೇರಿ, ಗದಗ 1ನೇ ಮತ್ತು 2ನೇ ವೃತ್ತ ಗದಗ, ಮುಂಡರಗಿ, ರೋಣ, ಗಜೇಂದ್ರಗಡ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ ತಾಲೂಕಿನ ಕಾರ್ಮಿಕ ನಿರೀಕ್ಷಕರುಗಳ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

### ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘಕ್ಕೆ ಮತ್ತೊಂದು ಗರಿ!

# ರಾಜ್ಯ ಉಪಾಧ್ಯಕ್ಷರಾಗಿ ಡಾ.ಬಸವರಾಜ ಬಳ್ಳಾರಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾಗಿ ಡಾ. ಬಸವರಾಜ ಬಳ್ಳಾರಿ ನೇಮಕಗೊಂಡಿದ್ದಾರೆ.

ರಾಜ್ಯ ಅಧ್ಯಕ್ಷರಾದ ಸಿ ಎಸ್ ಷಡಾಕ್ಷರಿ ಅವರು ನೇಮಕಗೊಳಿಸಿದ್ದಾರೆ.

ಗದಗ ಜಿಲ್ಲೆಯ ಯುವ ಸಂಘಟನಾ ಚತುರ ಹಾಗೂ ಗದಗ ಜಿಲ್ಲಾ ಶಾಖೆಯ ಅಧ್ಯಕ್ಷರಾದ ಡಾ. ಬಸವರಾಜ ಬಳ್ಳಾರಿ ಅವರ ನೇಮಕ ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘಕ್ಕೆ ಹೆಮ್ಮೆ ತರುವ ವಿಷಯವಾಗಿದೆ ಎಂದು ಜಿಲ್ಲೆಯ ನೌಕರ ವಲಯದಲ್ಲಿ ಪ್ರಶಂಸೆ ವ್ಯಕ್ತವಾಗಿದೆ.

ಡಾ. ಬಸವರಾಜ ಬಳ್ಳಾರಿ ಅವರು ಕಳೆದ ಹಲವು ವರ್ಷಗಳಿಂದ ಸರ್ಕಾರಿ ನೌಕರರ ಹಕ್ಕುಗಳು, ಸೇವಾ ಭದ್ರತೆ, ವೇತನ, ವರ್ಗಾವಣೆ ಹಾಗೂ ಕಲ್ಯಾಣ ಯೋಜನೆಗಳಿಗಾಗಿ ರಾಜ್ಯ ಅಧ್ಯಕ್ಷ ಸಿ.ಎಸ್ ಷಡಾಕ್ಷರಿ ಜೊತೆಗೆ ಶ್ರಮಿಸಿದ್ದಾರೆ.

ಹೀಗಾಗಿ ರಾಜ್ಯ ಘಟಕದ ಉಪಾಧ್ಯಕ್ಷ ಸ್ಥಾನದ ಈ ಮಹತ್ವದ ಜವಾಬ್ದಾರಿಯನ್ನು ನೀಡಲಾಗಿದೆ ಎಂದು ಹೇಳಲಾಗುತ್ತದೆ.

ಗದಗ ಜಿಲ್ಲಾ ಶಾಖೆಯ ಅಧ್ಯಕ್ಷರಾಗಿ ಆಯ್ಕೆ ಆದ ನಂತರ ಬಸವರಾಜ್ ಬಳ್ಳಾರಿ ಅವರು, ಸಂಘಟನೆಯನ್ನು ಬಲಪಡಿಸುವುದರ ಜೊತೆಗೆ, ನೌಕರರ ಕಾರ್ಯಾಗಾರ, ರಾಜ್ಯವೇ ತಿರುಗಿ ನೋಡುವಂತೆ ಜಿಲ್ಲಾ ಮಟ್ಟದ ಕ್ರೀಡಾಕೂಟ, ಸಾಂಸ್ಕೃತಿಕ ಹಬ್ಬ ಹಾಗೂ ಸರ್ಕಾರಿ ನೌಕರರ ಹಿತಾಸಕ್ತಿ ಕಾಪಾಡುವಲ್ಲಿ ಸೇವಕನಂತೆ ಕಾರ್ಯನಿರ್ವಹಿಸುವ ವೈಖರಿ ಆಧರಿಸಿ ಈ ಸ್ಥಾನ ಕೊಡಲಾಗಿದೆ ಎನ್ನಲಾಗುತ್ತದೆ.



> ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರು ನನ್ನ ಮೇಲೆ ಬಲವಾದ ನಂಬಿಕೆ ಇಟ್ಟು, ಮಹತ್ವದ ಹುದ್ದೆ ನೀಡಿದ್ದಾರೆ. ಅವರ ವಿಶ್ವಾಸಕ್ಕೆ ಚ್ಯುತಿ ಬಾರದಂತೆ, ನೀಡಿದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿ, ಸಂಘ ಹಾಗೂ ನೌಕರರ ಹಿತಾಸಕ್ತಿಗಾಗಿ ಹೋರಾಟ ಮಾಡಲಾಗುವುದು.
>
> **-ಡಾ. ಬಸವರಾಜ ಬಳ್ಳಾರಿ,** ನೂತನ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾ ಅಧ್ಯಕ್ಷರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ.

ಈ ಐತಿಹಾಸಿಕ ನೇಮಕಕ್ಕೆ ಗದಗ ಜಿಲ್ಲೆಯ ಸಮಸ್ತ ಸರ್ಕಾರಿ ನೌಕರರ ಪರವಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘ ಗದಗ ಜಿಲ್ಲಾ ಶಾಖೆ ಅಭಿನಂದನೆ ಸಲ್ಲಿಸಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಶಾಖೆಯ ಕಾರ್ಯಾಧ್ಯಕ್ಷರಾದ ಸಿದ್ದಪ್ಪ ಎನ್. ಲಿಂಗದಾಳ, ಖಜಾಂಚಿ ಮಹಂತೇಶ ನಿಟ್ಟಾಲಿ, ಅಜಯಕುಮಾರ ಕಲಾಲ, ದೇವೇಂದ್ರಪ್ಪ ತಳವಾರ, ರಾಜು ಕೊಂಟಿಗೂಣ್ಣವರ, ಶ್ರೀಧರ ಚಿನಗುಂಡಿ, ಶರಣಯ್ಯ ಪಾರ್ವತಿಮಠ, ಮುತ್ತುರಾಜ ಮಲಕಶೆಟ್ಟಿ, ರಾಜಕುಮಾರ್ ಸೊಪ್ಪಡ್ಲ, ಸುರೇಶ ಹುಚ್ಚಣ್ಣವರ, ಶರಣು ಸಂಗಳದ, ದೇವಪ್ಪ ▶▶ 2ನೇ ಪುಟಕ್ಕೆ

### ಅಂತಾರಾಷ್ಟ್ರೀಯ ಲಿಂಗಾಯತ ಯುವ ವೇದಿಕೆಯಿಂದ ಜ. 29ರಿಂದ ಫೆಬ್ರುವರಿ 1ರವರೆಗೆ

## ವೀರಶೈವ ಲಿಂಗಾಯತ ಜಾಗತಿಕ ಉದ್ಯಮ ಸಮ್ಮೇಳನ




■ ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ಲಿಂಗಾಯತ ಯುವ ವೇದಿಕೆ ವತಿಯಿಂದ ಜ. 29ರಿಂದ ಫೆಬ್ರುವರಿ 1ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ವೀರಶೈವ ಲಿಂಗಾಯತ ಜಾಗತಿಕ ಉದ್ಯಮ ಸಮ್ಮೇಳನ ನಡೆಯಲಿದೆ ಎಂದು ಸಂಸ್ಥೆಯ ಹುಬ್ಬಳ್ಳಿ ವಲಯದ ಅಧ್ಯಕ್ಷ ಗುರು ಅಂಗಡಿ ಹೇಳಿದರು.

ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಈ ಹಿಂದೆ ನಡೆದಿರುವ ಮೂರು ಉದ್ಯಮ ಸಮ್ಮೇಳನಗಳು ದೊಡ್ಡ ಯಶಸ್ಸು ಕಂಡಿದ್ದು, ನೂರಾರು ಕೋಟಿ ವಹಿವಾಟು ನಡೆಸಿವೆ. ಈ ಹಿನ್ನೆಲೆಯಲ್ಲಿ 4ನೇ ವರ್ಷದ ಸಮ್ಮೇಳನವನ್ನು ನಾಲ್ಕು ದಿನಗಳ ಕಾಲ ನಡೆಸಲು ಉದ್ದೇಶಿಸಲಾಗಿದೆ ಎಂದರು.

2023ರಲ್ಲಿ ಆರಂಭಗೊಂಡ ಸಮ್ಮೇಳವನ್ನು ಮೊದಲ ಬಾರಿಗೆ ಬೆಂಗಳೂರಿನಲ್ಲಿ ನಡೆಸಲಾಗಿತ್ತು. ಆಗ 35 ಕೋಟಿ ರೂ ಮೊತ್ತದ ವ್ಯವಹಾರ ಒಡಂಬಡಿಕೆಗಳು ನಡೆದಿದ್ದವು. 2024ರಲ್ಲಿ ಹುಬ್ಬಳ್ಳಿಯಲ್ಲಿ ನಡೆದ ಸಮ್ಮೇಳನದಲ್ಲಿ 64 ಕೋಟಿ ರೂ, 2025ರಲ್ಲಿ ಮೈಸೂರಿನಲ್ಲಿ ನಡೆದ ಸಮ್ಮೇಳನದಲ್ಲಿ 135 ಕೋಟಿ ರೂ ವ್ಯವಹಾರ ನಡೆದಿತ್ತು ಎಂದು ತಿಳಿಸಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ನಾಲ್ಕನೇ ಸಮ್ಮೇಳನದಲ್ಲಿ 75 ಸಾವಿರಕ್ಕೂ ಅಧಿಕ ಮಂದಿ ಭಾಗವಹಿಸುವ ನಿರೀಕ್ಷೆ ಇದ್ದು, ಈ ಪ್ರದೇಶದಲ್ಲಿನ ಅತಿದೊಡ್ಡ ಸಮುದಾಯ ನೇತೃತ್ವದ ಸಮ್ಮೇಳನ ಎಂಬ ದಾಖಲೆ ಬರೆಯಲಿದೆ ಎಂದರು.

ನಾಲ್ಕು ದಿನಗಳ ಸಮ್ಮೇಳನದಲ್ಲಿ ಉದ್ಯಮಿಗಳು, ಕೈಗಾರಿಕಾ ದಿಗ್ಗಜರು, ನೀತಿ ನಿರ್ಧಾರಕರು, ಸ್ಟಾರ್ಟ್‌ಅಪ್‌ಗಳು, ಎಂಎಸ್‌ಎಂಇಗಳು ಒಂದೇ ವೇದಿಕೆಯಲ್ಲಿ ಸೇರಲಿವೆ. ಜ. 29ರಂದು ಸಂಜೆ 4.30ಕ್ಕೆ ಸಿದ್ಧಗಂಗಾ ಶ್ರೀಗಳು ಸಮ್ಮೇಳನ ಉದ್ಘಾಟಿಸುವರು. ಸಚಿವರಾದ ಎಂ.ಬಿ. ಪಾಟೀಲ, ಈಶ್ವರ ಖಂಡ್ರೆ, ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಸೇರಿದಂತೆ ಹಲವರು ಉಪಸ್ಥಿತರಿರುವರು ಎಂದು ತಿಳಿಸಿದರು.

ಫೆಬ್ರವರಿ 1ರಂದು ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ಚಿಕ್ಕಮಗಳೂರಿನ ಬಸವತತ್ವ ಪೀಠದ ಬಸವ ಮರುಳಸಿದ್ಧ ಸ್ವಾಮೀಜಿ ಅಧ್ಯಕ್ಷತೆಯಲ್ಲಿ ನಡೆಯಲಿದೆ. ಸಚಿವ ಡಾ. ಶರಣಪ್ರಕಾಶ್ ಪಾಟೀಲ, ವಿಜಯಾನಂದ ಕಾಶಪ್ಪನವರ, ಶಂಕರ್ ಬಿದರಿ, ಮುರುಗೇಶ ನಿರಾಣಿ, ರಾಣಿ ಸತೀಶ್, ಐಎಲ್‌ವೈಎಫ್ ಸಂಸ್ಥಾಪಕ ಟ್ರಸ್ಟಿ ನವೀನ್ ಕೆ.ಎಸ್. ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.

### ಲಿಂ. ಪಂ. ಪುಟ್ಟರಾಜ ಗವಾಯಿಗಳವರ 112ನೇ ವರ್ಷದ ಜನ್ಮದಿನದ ಹಿನ್ನೆಲೆ

## ಮಾರ್ಚ್ 3ರಂದು ಸರ್ವಧರ್ಮ ಸಾಮೂಹಿಕ ವಿವಾಹ




■ ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ನಡೆದಾಡುವ ದೇವರಾದ ಲಿಂ. ಪಂ. ಪುಟ್ಟರಾಜ ಗವಾಯಿಗಳವರ 112ನೇ ಜನ್ಮದಿನದ ಅಂಗವಾಗಿ ದಿ. ಕೆ.ಎಚ್. ಪಾಟೀಲ ಅಭಿಮಾನಿ ಬಳಗದ ವತಿಯಿಂದ ನಗರಸಭೆಯ ಮಾಜಿ ಅಧ್ಯಕ್ಷ ಪೀರಸಾಬ್ ಕೌತಾಳ ಅವರ ನೇತೃತ್ವದಲ್ಲಿ ಮಾ. 3ರಂದು ಉಚಿತ ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಹೇಳಿದರು.

> ಮಾ. 3ರಂದು ನಡೆಯುವ ಸರ್ವಧರ್ಮ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ವಧು-ವರರು ಫೆಬ್ರವರಿ 25ರ ಒಳಗಾಗಿ ಶ್ರೀಮಠದ ಕಚೇರಿಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಶ್ರೀಮಠದ ವ್ಯವಸ್ಥಾಪಕರಾದ ಹೇಮರಾಜ ಶಾಸ್ತ್ರಿಗಳು ಹೆಡಿಗ್ಗೊಂಡ-9945255858, ಸಹ ವ್ಯವಸ್ಥಾಪಕರಾದ ಶರಣಯ್ಯ ಹಿಡ್ಕಿಮಠ -7353266455 ಹಾಗೂ ರಾಮಯ್ಯ-8151940394 ಅವರನ್ನು ಸಂಪರ್ಕಿಸಬಹುದು ಎಂದು ಪೀರಸಾಬ್ ಕೌತಾಳ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ವೀರೇಶ್ವರ ಪುಣ್ಯಾಶ್ರಮದ ಪರಮ ಭಕ್ತರಾದ ಪೀರಸಾಬ್ ಕೌತಾಳ ದಂಪತಿಗಳು ಕಳೆದ 12 ವರ್ಷಗಳಿಂದ ಪೂಜ್ಯ ಗುರುಗಳ ಜನ್ಮದಿನಾಚರಣೆಯನ್ನು ಆಚರಿಸಿಕೊಂಡು ಬರುತ್ತಿದ್ದು, ಕಳೆದ 7 ವರ್ಷಗಳಿಂದ ಗುರುಗಳ ಜನ್ಮದಿನಾಚರಣೆಯ ಅಂಗವಾಗಿ ಸರ್ವ ಧರ್ಮಗಳ ಸಾಮೂಹಿಕ ವಿವಾಹ ಮಹೋತ್ಸವವನ್ನು ಉಚಿತವಾಗಿ ಮಾಡುತ್ತ ಬರುತ್ತಿರುವುದು ಸಂತಸ ವಿಷಯವಾಗಿದೆ. ಸಾಮೂಹಿಕ ವಿವಾಹ ಮಹೋತ್ಸವದಲ್ಲಿ ಭಾಗವಹಿಸುವ ವಧುವಿಗೆ ತಾಳಿ, ಬಟ್ಟೆ, ಕಾಲುಂಗುರ ಮತ್ತು ವರರಿಗೆ ಬಟ್ಟೆಗಳನ್ನು ನೀಡಲಾಗುವುದು. ಅಂದು ಬೆಳಿಗ್ಗೆ ಕುಂಭೋತ್ಸವ, ಧರ್ಮಸಭೆ ನಂತರ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗುವದು. ಇದೇ ಸಂದರ್ಭದಲ್ಲಿ ಕೊಪ್ಪಳದ ಹಿರಿಯ ಸಂಗೀತಗಾರರಾದ ಸದಾಶಿವ ಪಾಟೀಲ ಅವರಿಗೆ ಪಂ. ಪುಟ್ಟರಾಜ ಕವಿ ಗವಾಯಿಗಳವರ ಹೆಸರಿನಲ್ಲಿ ನಗದು ಸಹಿತ ಪ್ರಶಸ್ತಿ ನೀಡಲಾಗುವುದು. ಎಲ್ಲರೂ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ದಿ. ಕೆ.ಎಚ್. ಪಾಟೀಲ ಅಭಿಮಾನಿ ಬಳಗದ ಅಧ್ಯಕ್ಷರಾದ ಪೀರಸಾಬ್ ಕೌತಾಳ ಮಾತನಾಡಿ, ಪೂಜ್ಯಶ್ರೀ ಪಂ. ಪುಟ್ಟರಾಜ ಗವಾಯಿಗಳವರ ಜಯಂತಿ ದಿನದಂದು ಮದುವೆಯಾಗುವುದು ಪೂರ್ವಜನ್ಮದ ಪುಣ್ಯವಾಗಿದೆ. ಕಳೆದ 7 ವರ್ಷಗಳಿಂದ ನಿರಂತರವಾಗಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರಲಾಗುತ್ತಿದೆ. ಮಾ. 2ರಂದು ಸಂಜೆ ರಸಮಂಜರಿ ಕಾರ್ಯಕ್ರಮ ಮತ್ತು ಮಾ. 3ರಂದು 1012 ಕುಂಭಮೇಳದ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪಿ.ಸಿ. ಹಿರೇಮಠ, ಆನಂದ ಸಾಲಿಗ್ರಾಮ, ಮಂಜುನಾಥ ಮುಳಗುಂದ, ವಿನೋದ ಶಿದ್ಲಿಂಗ ಮುಂತಾದವರು ಉಪಸ್ಥಿತರಿದ್ದರು.

## ಉತ್ತರ ಪ್ರದೇಶ ಮರ್ಯಾದೆಗೇಡು ಹತ್ಯೆ: ಅಂತರ್ಧರ್ಮೀಯ ಜೋಡಿಯನ್ನು ಕೊಂದ ಯುವತಿ ಸಹೋದರರು



■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಮೊರಾದಾಬಾದ್‌ನ ಕಾಡಿನಲ್ಲಿ ಅಂತರ್ಧರ್ಮೀಯ ಜೋಡಿಯ ಶವ ಪತ್ತೆಯಾಗಿದ್ದು, ಪ್ರಾಥಮಿಕ ತನಿಖೆಯಲ್ಲಿ ಆಕೆಯ ಸಹೋದರರು ಮರ್ಯಾದೆಗೇಡು ಹತ್ಯೆ ನಡೆಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಯುವತಿಯನ್ನು 19 ವರ್ಷದ ಕಾಜಲ್ ಎಂದು ಗುರುತಿಸಲಾಗಿದ್ದು, ಮೃತ ಯುವಕ 27 ವರ್ಷದ ಅರ್ಮಾನ್. ಇಬ್ಬರೂ ಮೊರಾದಾಬಾದ್‌ನ ಉಮ್ರಿ ಸಬ್ಜಿಪುರ್ ಗ್ರಾಮದ ನಿವಾಸಿಗಳಾಗಿದ್ದು, ಕಾಜಲ್ ವಿದ್ಯಾರ್ಥಿನಿಯಾಗಿದ್ದರು. ಯುವತಿಯ ಮೂವರು ಸಹೋದರರ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಇಬ್ಬರನ್ನು ಬಂಧಿಸಲಾಗಿದೆ.

ಪೊಲೀಸರ ಪ್ರಕಾರ, ಕಾಜಲ್ ಮತ್ತು ಅರ್ಮಾನ್ ಮೂರು ದಿನಗಳ ಹಿಂದೆ ತಮ್ಮ ಮನೆಗಳಿಂದ ನಾಪತ್ತೆಯಾಗಿದ್ದರು. ಅವರ ಕುಟುಂಬಗಳು ಕಾಣೆಯಾಗಿರುವ ಬಗ್ಗೆ ದೂರು ದಾಖಲಿಸಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿ ಸತ್ಪಾಲ್ ಆಂಟಿಲ್ ಅವರು, ಯುವಕನ ಕುಟುಂಬವು ಬುಧವಾರ ದೂರು ನೀಡಿದ್ದು, ಯುವತಿ ಕುಟುಂಬದ ಕಡೆಯಿಂದ ಗುರುವಾರ ಬೆಳಿಗ್ಗೆ ದೂರು ದಾಖಲಾಗಿದೆ. ಕೆಲವು ಗಂಟೆಗಳ ನಂತರ, ಅವರಿಬ್ಬರ ಶವಗಳು ಕಾಡಿನಲ್ಲಿ ಪತ್ತೆಯಾಗಿವೆ.

"ಎರಡೂ ಕುಟುಂಬಗಳಿಂದ ಕಾಣೆಯಾದ ಬಗ್ಗೆ ದೂರು ನೀಡಿದ ನಂತರ ನಾವು ತನಿಖೆಯನ್ನು ಪ್ರಾರಂಭಿಸಿದ್ದೇವೆ. ಮಹಿಳೆಯ ಸಹೋದರರು ಇಬ್ಬರನ್ನೂ ಕೊಲೆ ಮಾಡಿದ್ದಾರೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ. ಇಬ್ಬರು ಸಹೋದರರನ್ನು ಬಂಧಿಸಲಾಗಿದೆ. ಅವರ ನಿರ್ದೇಶನದ ಮೇರೆಗೆ, ದಂಪತಿಗಳ ಶವಗಳನ್ನು ಗ್ರಾಮದಿಂದ ಕೆಲವು ಮೀಟರ್ ದೂರದಲ್ಲಿರುವ ದೇವಾಲಯದ ಹಿಂದಿನ ಕಾಡಿನಲ್ಲಿ ವಶಪಡಿಸಿಕೊಳ್ಳಲಾಗಿದೆ" ಎಂದು ಆಂಟಿಲ್ ಹೇಳಿದರು.

ಮ್ಯಾಜಿಸ್ಟ್ರೇಟ್ ಸಮ್ಮುಖದಲ್ಲಿ ಎರಡೂ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ, ಮರಣೋತ್ತರ ಪರೀಕ್ಷೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

## ಚೈಬಾಸಾ ಎನ್‌ಕೌಂಟರ್; ಕುಖ್ಯಾತ ಮಾವೋವಾದಿ ನಾಯಕ 'ಅನಲ್ ದಾ' ಸೇರಿ 8 ನಕ್ಸಲರ ಹತ್ಯೆ



■ವಿಜಯಸಾಕ್ಷಿ ಸುದ್ದಿ, ಜಾರ್ಖಂಡ್

ಜಾರ್ಖಂಡ್ ಪೊಲೀಸರು ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ಪ್ರಮುಖ ಯಶಸ್ಸನ್ನು ಸಾಧಿಸಿದೆ. ಚೈಬಾಸಾ ಜಿಲ್ಲೆಯಲ್ಲಿ ನಡೆದ ಭೀಕರ ಎನ್‌ಕೌಂಟರ್‌ನಲ್ಲಿ, ಭದ್ರತಾ ಪಡೆಗಳು 8 ನಕ್ಸಲರನ್ನು ಕೊಂದಿವೆ. ಅವರ ತಲೆಗೆ 1 ಕೋಟಿ ರೂ. ಬಹುಮಾನ ಹೊಂದಿದ್ದ ಭಯಾನಕ ನಕ್ಸಲ್ ಅನಲ್ ದಾ ಕೂಡ ಸೇರಿದ್ದಾರೆ.

ಅನಲ್ ಅವರನ್ನು ಜಾರ್ಖಂಡ್‌ನ ಅತ್ಯಂತ ಪ್ರಮುಖ ಮಾವೋವಾದಿ ನಾಯಕರಲ್ಲಿ ಒಬ್ಬರೆಂದು ಪರಿಗಣಿಸಲಾಗಿದೆ.

ನಕ್ಸಲರ ಉಪಸ್ಥಿತಿಯ ಬಗ್ಗೆ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದ ನಂತರ ಚೈಬಾಸಾದ ದಟ್ಟ ಅರಣ್ಯ ಪ್ರದೇಶದಲ್ಲಿ ಈ ಎನ್‌ಕೌಂಟರ್ ನಡೆದಿದೆ. ಕಾರ್ಯಾಚರಣೆಯ ಸಮಯದಲ್ಲಿ, ನಕ್ಸಲರು ಪಡೆಗಳ ಮೇಲೆ ಗುಂಡು ಹಾರಿಸಿದರು. ಇದು ಭದ್ರತಾ ಪಡೆಗಳಿಂದ ಭಾರೀ ಪ್ರತೀಕಾರದ ಗುಂಡಿನ ದಾಳಿಗೆ ಕಾರಣವಾಯಿತು.

ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ದೊಡ್ಡ ಸಂಗ್ರಹವನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಶಂಕಿಸಲಾಗಿದೆ. ಈ ಪ್ರದೇಶದಲ್ಲಿ ಇನ್ನೂ ಶೋಧ ಕಾರ್ಯಾಚರಣೆಗಳು ನಡೆಯುತ್ತಿದ್ದು, ನಕ್ಸಲರು ತಪ್ಪಿಸಿಕೊಳ್ಳದಂತೆ ಭದ್ರತಾ ಪಡೆಗಳು ಇಡೀ ಪ್ರದೇಶವನ್ನು ಸುತ್ತುವರೆದಿವೆ. "ಕನಿಷ್ಠ ಎಂಟು ಮಾವೋವಾದಿಗಳು ಸಾವನ್ನಪ್ಪಿದ್ದಾರೆ. ಗುಂಡಿನ ಚಕಮಕಿ ನಿಂತ ನಂತರ ಶೋಧ ಕಾರ್ಯಾಚರಣೆ ನಡೆಯುತ್ತಿದೆ. ಸಾವುನೋವುಗಳ ಅಂತಿಮ ಸಂಖ್ಯೆಯನ್ನು ನಂತರ ಒದಗಿಸಲಾಗುವುದು" ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಹೆಬ್ಬಾಳ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಣಕಿನಾಯ್ಕ ಅಭಿಪ್ರಾಯ

# ಶಿಕ್ಷಣ ಎಂಬುದು ಹುಲಿಯ ಹಾಲು ಇದ್ದಂತೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಕ್ಕಳಲ್ಲಿ ಕಲಿಕಾ ಆಸಕ್ತಿ ಹೆಚ್ಚಿಸಲು ಮತ್ತು ಕಲಿಕೆಯನ್ನು ಸಂತೋಷದಾಯಕ ಅನುಭವವನ್ನಾಗಿ ಮಾಡಲು ಎಫ್‌ಎಲ್‌ಎನ್ ಒಂದು ವಿಶೇಷ ಕಾರ್ಯಕ್ರಮವಾಗಿದ್ದು, ಇದರಲ್ಲಿ ಮಕ್ಕಳನ್ನು ಚಟುವಟಿಕೆಗಳ ಮೂಲಕ ಗುರುತಿಸಬಹುದು. ಕಲಿಕೆ ಎನ್ನುವುದು ಪುಸ್ತಕದಿಂದ ಕಲಿಯುವದಷ್ಟೇ ಅಲ್ಲ, ಅದು ಅನುಭವದಿಂದ ಕಲಿಯುವದಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಣಕಿನಾಯ್ಕ ಅಭಿಪ್ರಾಯಪಟ್ಟರು.

ತಾಲೂಕಿನ ಪಿಎಂಶ್ರೀ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಹೆಬ್ಬಾಳ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹೆಬ್ಬಾಳ ಸಿಆರ್‌ಪಿ ತಿರಕಪ್ಪ ಪೂಜಾರ, ಈ ಕಲಿಕಾ ಹಬ್ಬದಲ್ಲಿ ಒಟ್ಟು 11 ಸ್ಪರ್ಧೆಗಳಿರುತ್ತವೆ. ಆದರೆ ನಾವು ಇಲಾಖೆಯ ವತಿಯಿಂದ 7 ಸ್ಪರ್ಧೆಗಳಿಗೆ ಅವಕಾಶ ನೀಡಿದ್ದು, ಅದರಲ್ಲಿ ಗಟ್ಟಿ ಓದು, ಕತೆ ಹೇಳುವದು, ಸಂತೋಷದಾಯಕ ಗಣಿತ, ಆರೋಗ್ಯ ಮತ್ತು ಪೌಷ್ಟಿಕಾಂಶ, ಪೋಷಕರ ಹಾಗೂ ಶಿಕ್ಷಕರ ಸಂಬಂಧ ಕುರಿತು ಚಟುವಟಿಕೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಮಕ್ಕಳಲ್ಲಿ ಇರುವ ಪ್ರತಿಭೆಯನ್ನು ಕನ್ನಡ ಮತ್ತು ಗಣಿತ ವಿಷಯಗಳಲ್ಲಿ ಸ್ಪರ್ಧೆ ಹಾಗೂ ಚಟುವಟಿಕೆ ಮೂಲಕ ತಿಳಿಯಲು ಸಹಕಾರಿಯಾಗಿದ್ದು, ಮಕ್ಕಳು ಶಾಲೆಯನ್ನು ತಪ್ಪಿಸದಂತೆ ನೋಡಿಕೊಳ್ಳುವ ಜವಾಬ್ದಾರಿ ಪಾಲಕರದಾಗಿರುತ್ತದೆ. ಶಿಕ್ಷಕರೊಂದಿಗೆ ಪಾಲಕರು ಕೈಜೋಡಿಸಿದಾಗ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಸಹಾಯವಾಗುತ್ತದೆ ಎಂದರು.




ಸರಕಾರಿ ನೌಕರರ ಸಂಘದ ಶಿರಹಟ್ಟಿ ಘಟಕದ ಗೌರವಾಧ್ಯಕ್ಷ ಎಸ್.ಕೆ. ಪಾಟೀಲ ಮಾತನಾಡಿ, ಶಾಲೆಯಲ್ಲಿ ಕಲಿತರೂ ಕೂಡ ಮನೆಯಲ್ಲಿ ಪುನರಾವರ್ತನೆ ಆಗಬೇಕು. ಅಂದಾಗ ವಿದ್ಯಾರ್ಥಿ ಕಲಿಕೆಗೆ ಮನದಟ್ಟಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯ ಉಪನಿರ್ದೇಶಕ (ಅಭಿವೃದ್ಧಿ) ಜಿ.ಎಂ. ಮುಂದಿನಮನಿ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಫಕ್ಕಿರಪ್ಪ ನರಸಮ್ಮನವರ, ಎಸ್‌ಡಿಎಂಸಿ ಅಧ್ಯಕ್ಷರಾದ ಮಲ್ಲನಗೌಡ ಪಾಟೀಲ, ಉಪಾಧ್ಯಕ್ಷರಾದ ನೀಲಮ್ಮ ನಡುವಿನಕೇರಿ, ಸಿಆರ್‌ಪಿಗಳಾದ ತಿರಕಪ್ಪ ಪೂಜಾರ, ಸತೀಶ ಪಶುಪತಿಹಾಳ, ಆರ್. ಮಾಂತೇಶ, ಸಿ.ವಿ. ವಡಕಣ್ಣನವರ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎಫ್. ವಾಯ್. ಪಾಟೀಲ, ಬನಶಂಕರಿ ದೇವಿ ಕಾಲೇಜಿನ ಪ್ರಾಚಾರ್ಯ ನವೀನ ಅಳವಂಡಿ, ಶಾಲೆಯ ಪ್ರಧಾನ ಗುರುಗಳಾದ ವಿ.ಎನ್. ಪಾಟೀಲ ಸೇರಿದಂತೆ ಹೆಬ್ಬಾಳ ಕ್ಲಸ್ಟರಿನ ಎಲ್ಲಾ ಶಾಲೆಗಳ ಪ್ರಧಾನ ಗುರುಗಳು, ಸಿಬ್ಬಂದಿ ವರ್ಗ, ನಿರ್ಣಾಯಕರು, ಗ್ರಾಮದ ಗುರು-ಹಿರಿಯರು ಪಾಲ್ಗೊಂಡಿದ್ದರು. ಆರ್.ಟಿ. ಶಿವಪ್ಪಯ್ಯನಮಠ ಕಾರ್ಯಕ್ರಮ ನಿರ್ವಹಿಸಿದರು. ಕಲಿಕಾ ಹಬ್ಬದಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

> ಶಿಕ್ಷಣ ಎನ್ನುವುದು ಹುಲಿ ಹಾಲು ಇದ್ದಂತೆ. ಅದನ್ನು ಕುಡಿದವರು ಘರ್ಜಿಸಲೇಬೇಕು. ಉತ್ತಮ ಶಿಕ್ಷಣ ಪಡೆದುಕೊಂಡವರು ಸಮಾಜದಲ್ಲಿ ತಲೆ ಎತ್ತಿ ನಡೆಯಲು ಸಾಧ್ಯ. ತಾಯಿ ಮೊದಲ ಗುರುವಾಗಿದ್ದು, ಮಕ್ಕಳ ಬಗ್ಗೆ ಕಾಳಜಿ ವಹಿಸಬೇಕು. ಮಕ್ಕಳು ಶಾಲೆಯಿಂದ ಮನೆಗೆ ಬಂದಾಗ ಮಗುವಿನ ಕಡೆಗೆ ಗಮನ ನೀಡಬೇಕು. ಮಕ್ಕಳ ಕೈಗೆ ಮೊಬೈಲ್ ನೀಡದೇ ಪುಸ್ತಕ ನೀಡಿ ಮಗುವಿನ ಸರ್ವಾಂಗೀಣ ಅಭಿವೃದ್ಧಿಯ ಕಡೆಗೆ ಗಮನ ಹರಿಸಬೇಕು ಎಂದು ಎಚ್. ನಾಣಕಿನಾಯ್ಕ ಕಿವಿಮಾತು ಹೇಳಿದರು.

## ಜಮ್ಮು-ಕಾಶ್ಮೀರ| 200 ಅಡಿ ಆಳದ ಕಂದಕಕ್ಕೆ ಉರುಳಿದ ವಾಹನ; 10 ಜನ ಸೇನಾ ಸಿಬ್ಬಂದಿ ಸಾವು



■ವಿಜಯಸಾಕ್ಷಿ ಸುದ್ದಿ, ಕಾಶ್ಮೀರ

ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯ ಭದರ್ವಾ ಪ್ರದೇಶದಲ್ಲಿ 200 ಅಡಿ ಆಳದ ಕಂದಕಕ್ಕೆ ವಾಹನ ಉರುಳಿ 10 ಸೇನಾ ಸಿಬ್ಬಂದಿ ಸಾವನ್ನಪ್ಪಿದ್ದು, ಏಳು ಮಂದಿ ಗಾಯಗೊಂಡಿದ್ದಾರೆ.

ಒಟ್ಟು 17 ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ಸೇನಾ ವಾಹನವು ಎತ್ತರದ ಪೋಸ್ಟ್ ಕಡೆಗೆ ಹೋಗುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ 200 ಅಡಿ ಆಳದ ಕಂದಕಕ್ಕೆ ಉರುಳಿ ಬಿದ್ದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭದರ್ವಾ-ಚಂಬಾ ಅಂತರರಾಜ್ಯ ರಸ್ತೆಯ ಖನ್ನಿ ಮೇಲ್ಭಾಗದಲ್ಲಿ ಅಪಘಾತ ಸಂಭವಿಸಿದೆ.

ಸೇನೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರು ಪ್ರಸ್ತುತ ಜಂಟಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಆರಂಭದಲ್ಲಿ, ನಾಲ್ವರು ಸೈನಿಕರು ಮೃತಪಟ್ಟಿದ್ದು, ಈಗ ಸಾವಿನ ಸಂಖ್ಯೆ 11 ಕ್ಕೆ ಏರಿದೆ.

ಗಾಯಗೊಂಡವರಲ್ಲಿ ಕೆಲವರು ಗಂಭೀರ ಗಾಯಗೊಂಡಿದ್ದು, ಅವರನ್ನು ವಿಶೇಷ ಚಿಕಿತ್ಸೆಗಾಗಿ ಉಧಂಪುರ ಮಿಲಿಟರಿ ಆಸ್ಪತ್ರೆಗೆ ಏರ್‌ಲಿಫ್ಟ್ ಮಾಡಲಾಗಿದೆ.

## ಆಂಧ್ರದಲ್ಲಿ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮ ಬಳಕೆ ನಿಷೇಧ?

■ವಿಜಯಸಾಕ್ಷಿ ಸುದ್ದಿ, ಆಂಧ್ರಪ್ರದೇಶ

ಕಳೆದ ತಿಂಗಳು ಆಸ್ಟ್ರೇಲಿಯಾ ಜಾರಿಗೆ ತಂದಂತೆಯೇ, 16 ವರ್ಷದೊಳಗಿನ ಮಕ್ಕಳಿಗಾಗಿ ಸರ್ಕಾರವು ಸಾಮಾಜಿಕ ಮಾಧ್ಯಮವನ್ನು ನಿಷೇಧಿಸಲು ಯೋಜಿಸುತ್ತಿದೆ ಎಂದು ಆಂಧ್ರಪ್ರದೇಶ ಸಚಿವ ನಾರಾ ಲೋಕೇಶ್ ಬಹಿರಂಗಪಡಿಸಿದ್ದಾರೆ.

ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆ (ಡಬ್ಲ್ಯೂಇಎಫ್)ಯ ಸಂದರ್ಭದಲ್ಲಿ ಬ್ಲೂಮ್‌ಬರ್ಗ್ ಜೊತೆ ಮಾತನಾಡಿದ ಆಂಧ್ರ ಸರ್ಕಾರದ ಐಟಿ ಸಚಿವರು, ನಿರ್ದಿಷ್ಟ ವಯಸ್ಸಿನೊಳಗಿನ ಯುವಕರು ಸಾಮಾಜಿಕ ಮಾಧ್ಯಮದಲ್ಲಿ ಅವರು ಎದುರಾಗುವ ವಿಷಯವನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳುವುದಿಲ್ಲ, ಬಲವಾದ ಕಾನೂನು ಚೌಕಟ್ಟು ಈ ಸಮಯದ ಅಗತ್ಯವಾಗಿದೆ ಎಂದು ಹೇಳಿದರು.

"ನಿರ್ದಿಷ್ಟ ವಯಸ್ಸಿನೊಳಗಿನ ಯುವಜನರು ಅಂತಹ ವೇದಿಕೆಗಳಲ್ಲಿ ಇರಬಾರದು, ಏಕೆಂದರೆ ಅವರು ಒಡ್ಡಿಕೊಳ್ಳುವ ವಿಷಯವನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳುವುದಿಲ್ಲ. ಹೀಗಾಗಿ, ಬಲವಾದ ಕಾನೂನು ಚೌಕಟ್ಟು ಬೇಕಾಗಬಹುದು" ಎಂದು ಲೋಕೇಶ್ ಪ್ರತಿಪಾದಿಸಿದರು.

ಕಳೆದ ವರ್ಷ ಡಿಸೆಂಬರ್‌ನಲ್ಲಿ, ಆಸ್ಟ್ರೇಲಿಯಾದ ಆಂಥೋನಿ ಆಲ್ಬನೀಸ್ ಸರ್ಕಾರವು 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಟಿಕ್‌ಟಾ-ಕ್, ಎಕ್ಸ್, ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಯೂಟ್ಯೂಬ್ ಮತ್ತು ಸ್ನ್ಯಾಪ್‌ಚಾಟ್‌ನಂತಹ ಪ್ರಮುಖ ಸಾಮಾಜಿಕ ಮಾಧ್ಯಮ ವೇದಿಕೆಗಳ ಬಳಸುವುದನ್ನು ನಿಷೇಧಿಸಿತು. ನಿಷೇಧದ ಅಡಿಯಲ್ಲಿ, ಮಕ್ಕಳು ಹೊಸ ಖಾತೆಗಳನ್ನು ಸ್ಥಾಪಿಸಲು ಸಾಧ್ಯವಿಲ್ಲ. ಅಸ್ತಿತ್ವದಲ್ಲಿರುವ ಪ್ರೊಫೈಲ್‌ಗಳನ್ನು ನಿಷ್ಕ್ರಿಯಗೊಳಿಸಬೇಕಾಗುತ್ತದೆ.

ಆಂಧ್ರಪ್ರದೇಶದ ಸ್ಥಳೀಯ ಮಾಧ್ಯಮಗಳು ಸರ್ಕಾರವು ಅಂತಹ ಕ್ರಮವನ್ನು ಗಂಭೀರವಾಗಿ ಪರಿಗಣಿಸುತ್ತಿದೆ ಎಂದು ವರದಿ ಮಾಡಿದೆ.

ನಿಯಮ ಜಾರಿಗೆ ಬಂದರೆ, ಮಕ್ಕಳ ಸಾಮಾಜಿಕ ಮಾಧ್ಯಮ ಬಳಕೆಯ ಮೇಲೆ ನಿರ್ಬಂಧಗಳನ್ನು ತಂದ ಭಾರತದ ಮೊದಲ ರಾಜ್ಯ ಆಂಧ್ರವಾಗಲಿದೆ.

## ಎನ್‌ಡಿಎ ಸೇರಿದರೆ ಪ್ರಧಾನಿ ಮೋದಿಯಿಂದ ಕೇರಳಕ್ಕೆ ದೊಡ್ಡ ಪ್ಯಾಕೇಜ್: ಪಿಣರಾಯಿ ವಿಜಯನ್‌ಗೆ ಆಫರ್ ಕೊಟ್ಟ ಅಠಾವಳೆ



■ವಿಜಯಸಾಕ್ಷಿ ಸುದ್ದಿ, ಕೇರಳ

ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಬಿಜೆಪಿ ನೇತೃತ್ವದ ಎನ್‌ಡಿಎ ಸೇರಬೇಕೆಂದು ಕೇಂದ್ರ ರಾಜ್ಯ ಸಚಿವ ರಾಮದಾಸ್ ಬಂಡು ಅಠಾವಳೆ ಬುಧವಾರ ಸಲಹೆ ನೀಡಿದ್ದಾರೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ವಿಜಯನ್ ಎನ್‌ಡಿಎ ಸೇರಿದರೆ ಅದು ಕ್ರಾಂತಿಕಾರಿ ನಡೆಯಾಗುತ್ತದೆ. ಖಂಡಿತವಾಗಿಯೂ ಹೆಚ್ಚಿನ ಹಣ ಕೇರಳಕ್ಕೆ ಬರುತ್ತದೆ ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿಗೆ ಹಣವನ್ನು ಬಳಸಬಹುದು, ನರೇಂದ್ರ ಮೋದಿ ಕೇರಳಕ್ಕೂ ದೊಡ್ಡ ಪ್ಯಾಕೇಜ್ ನೀಡುತ್ತಾರೆ. ವಿಜಯನ್ ಎನ್‌ಡಿಎ ಸೇರಿದರೆ, ಅವರು ವಿಧಾನಸಭಾ ಚುನಾವಣೆಯಲ್ಲಿ ಗೆಲ್ಲುತ್ತಾರೆ. ಅವರು ಮತ್ತೆ ಮುಖ್ಯಮಂತ್ರಿಯಾಗಬಹುದು ಎಂದು ಕೇಂದ್ರ ಸಚಿವರು ಹೇಳಿದರು.

ಮಹಾರಾಷ್ಟ್ರ ಮೂಲದ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಎ) ಅಧ್ಯಕ್ಷ ಅಠಾವಳೆ, ಸಿಪಿಐ(ಎಂ) ಮತ್ತು ಸಿಪಿಐ ಕೂಡ ಎನ್‌ಡಿಎ ಸೇರಬೇಕು ಎಂದು ಹೇಳಿದರು.

## ರಾಜ್ಯ ಉಪಾಧ್ಯಕ್ಷರಾಗಿ ಡಾ.ಬಸವರಾಜ ಬಳ್ಳಾರಿ

▶▶ ಮೊದಲನೇ ಪುಟದಿಂದ



ದುರಗಣ್ಣವರ, ವಾಯ್.ಎನ್. ಕಡೆಮನಿ, ಶ್ರೀಮತಿ ಸರೋಜಾ ಕಟ್ಟಿಮನಿ, ಬಿ.ಸಿ. ಹಿರೇಹಾಳ, ಮಂಜುನಾಥ ಲಿಂಗದಾಳ ಸೇರಿದಂತೆ ಹಲವಾರು ಪದಾಧಿಕಾರಿಗಳು ಹಾಗೂ ಸದಸ್ಯರು ಅಭಿನಂದನೆಗಳನ್ನು ತಿಳಿಸಿದ್ದಾರೆ.

ಈ ನೇಮಕದಿಂದ ರಾಜ್ಯ ಮಟ್ಟದಲ್ಲಿ ಗದಗ ಜಿಲ್ಲೆಯ ಧ್ವನಿ ಇನ್ನಷ್ಟು ಬಲಗೊಳ್ಳಲಿದ್ದು, ಜಿಲ್ಲೆಯ ನೌಕರರ ಸಮಸ್ಯೆಗಳು ಪರಿಣಾಮಕಾರಿಯಾಗಿ ಸರ್ಕಾರದ ಗಮನಕ್ಕೆ ಬರಲಿವೆ ಎಂಬ ವಿಶ್ವಾಸವನ್ನು ಸಂಘದ ಪದಾಧಿಕಾರಿಗಳು ವ್ಯಕ್ತಪಡಿಸಿದ್ದಾರೆ

## ಸದನದಲ್ಲೇ ನೀಲಿ ಚಿತ್ರ ನೋಡಿ ರಾಜ್ಯದ ಮಾನ ಕಳೆದವರು ಯಾವ ಪಕ್ಷದವರು? ಬಿಜೆಪಿಗೆ ಹರಿಪ್ರಸಾದ್ ತಿರುಗೇಟು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸದನದ ಶಿಸ್ತು, ಘನತೆ, ಗೌರವದ ಬಗ್ಗೆ ಮಾತನಾಡಲು ಬಿಜೆಪಿಯವರಿಗೆ ಕಿಂಚಿತ್ತಾದರೂ ನೈತಿಕತೆ ಇದೆಯೇ? ಎಂದು ವಿಧಾನಪರಿಷತ್ ಸದಸ್ಯ ಹಾಗೂ ಹಿರಿಯ ಕಾಂಗ್ರೆಸ್ ನಾಯಕ ಬಿ.ಕೆ ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

ಗುರುವಾರ (ಜ.22) ವಿಶೇಷ ಅಧಿವೇಶನದ ವೇಳೆ ಸದನದಲ್ಲಿ ಗದ್ದಲ ಉಂಟಾದಾಗ ಬಿ.ಕೆ ಹರಿಪ್ರಸಾದ್ ಅವರು ಲೋಕಲ್ ರೌಡಿಯ ರೀತಿ ರಾಜ್ಯಪಾಲರಿಗೆ ಆವಾಜ್ ಹಾಕಿದ್ದಾರೆ ಎಂಬ ಬಿಜೆಪಿಯ ಟೀಕೆಗೆ ಅವರು ತಿರುಗೇಟು ಕೊಟ್ಟಿದ್ದಾರೆ. ಸದನದಲ್ಲಿ ಬಟ್ಟೆ ಹರಿದುಕೊಂಡು, ಕೈ ಕೈ ಮಿಲಾಯಿಸಿಕೊಂಡು ಗೂಂಡಾಗಳಂತೆ ವರ್ತಿಸಿದ ಮಹಾನುಭಾವರು ಯಾವ ಪಕ್ಷದವರು? ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸುವ ಸದನದಲ್ಲೇ ನೀಲಿ ಚಿತ್ರಗಳನ್ನು




ವೀಕ್ಷಿಸಿ ದೇಶದ ಜನರೆದುರು ರಾಜ್ಯದ ಮಾನ ಕಳೆದವರು ಯಾವ ಪಕ್ಷದವರು? ಎಂದು ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

ಸಭಾಪತಿಗಳ ಮುಖದ ಮೇಲೆ ಕಾಗದ ಪತ್ರಗಳನ್ನು ಹರಿದು ಬಿಸಾಕಿ ಅವಮಾನ ಮಾಡಿ ಸದನದಿಂದಲೇ ಉಚ್ಚಾಟಿತರಾದವರು ಯಾವ ಪಕ್ಷದವರು? ಇಂತಹ ಶಿಸ್ತು, ಸಂಸ್ಕಾರ, ಗೌರವ, ಘನತೆ ತಂದುಕೊಟ್ಟಿರುವ ಎಲ್ಲರೂ ನಮ್ಮ ಪಕ್ಷದವರೇ ಎಂದು ಎದೆ ತಟ್ಟಿ ಹೇಳುವ ಧೈರ್ಯ ಬಿಜೆಪಿಯವರಿಗೆ ಇದೆಯಾ? ಎಂದು ಕೇಳಿದ್ದಾರೆ.


ಸಂವಿಧಾನ ಹುದ್ದೆಯಲ್ಲಿರುವ ರಾಜ್ಯಪಾಲರ ಹುದ್ದೆಯನ್ನೇ ದುರಪಯೋಗ ಪಡಿಸಿಕೊಂಡು ರಾಜ್ಯ ರಾಜಕಾರಣದಲ್ಲೇ ಅತ್ಯಂತ ಕರಾಳ ದಿನವನ್ನು ಸೃಷ್ಟಿ ಮಾಡಿರುವ ಬಿಜೆಪಿ ನಾಯಕರಿಗೆ ಸಂವಿಧಾನದ ಮೌಲ್ಯಗಳ ಬಗ್ಗೆ ಮಾತಾನಾಡಲು ನೈತಿಕತೆ ಇಲ್ಲ ಎಂದಿದ್ದಾರೆ.

# ವಿದ್ಯಾರ್ಥಿಗಳು ಸಾಮಾನ್ಯ ಜ್ಞಾನವನ್ನು ಹೊಂದಬೇಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರೀಯ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ರಾಷ್ಟ್ರಪ್ರಜ್ಞೆ ಮೂಡಿಸುವ ಮುಖ್ಯ ಮಾರ್ಗಗಳಾಗಿದ್ದು, ಇವು ಕೇವಲ ಆಚರಣೆಗಳಿಗೆ ಮಾತ್ರ ಸೀಮಿತವಾಗದೇ ರಾಷ್ಟ್ರದ ಬಗ್ಗೆ ಅಭಿಮಾನ ಮೂಡಿಸುವಂತಾಗಬೇಕು ಎಂದು ಲಕ್ಷ್ಮೇಶ್ವರ ತಾಲೂಕಿನ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರ ತಾಲೂಕಾಡಳಿತ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಭವನದಲ್ಲಿ ಲಕ್ಷ್ಮೇಶ್ವರ ನಗರ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ಸಂವಿಧಾನ ಕುರಿತ ರಸಪ್ರಶ್ನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.



ಇಂತಹ ಸ್ಪರ್ಧೆಗಳು ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವ ಮೂಡಿಸುವ ಜೊತೆಗೆ ದೇಶಭಕ್ತಿಯನ್ನು ಬಿತ್ತುತ್ತವೆ. ಪಠ್ಯ ಶಿಕ್ಷಣದ ಹೊರತಾಗಿಯೂ ವಿದ್ಯಾರ್ಥಿಗಳು ಸಾಮಾನ್ಯ ಜ್ಞಾನವನ್ನು ಹೊಂದಬೇಕು. ಅದಕ್ಕಾಗಿ ದಿನಪತ್ರಿಕೆ, ಸ್ಪರ್ಧಾತ್ಮಕ ಪತ್ರಿಕೆಗಳನ್ನು ಓದಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಧಾನ ಗುರುಮಾತೆ ಜೆ.ವಿ. ಅರಳಿಕಟ್ಟಿ, ವಿದ್ಯಾರ್ಥಿಗಳು ತಲೆತಗ್ಗಿಸಿ ಮೊಬೈಲ್‌ನಲ್ಲಿ ಮುಳುಗದೆ ಪುಸ್ತಕವನ್ನು ಓದಿ ತಲೆಯೆತ್ತಿ ನಡೆಯಬೇಕು. ವಿದ್ಯಾರ್ಥಿಗಳಲ್ಲಿ ಹುದುಗಿರುವ ಪ್ರತಿಭೆಯನ್ನು ಹೊರತರುವುದಕ್ಕೆ ಇಂತಹ ರಸಪ್ರಶ್ನೆ ಸ್ಪರ್ಧೆಗಳು ಉತ್ತಮ ವೇದಿಕೆಯನ್ನು ಒದಗಿಸುತ್ತವೆ ಎಂದರು.

ಪ್ರೌಢ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ, ಪ್ರೌಢಶಾಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಎಸ್.ಡಿ. ಲಮಾಣಿ, ರಾಜ್ಯ ಸರಕಾರಿ ನೌಕರರ ಸಂಘದ ಪದಾಧಿಕಾರಿ ಎ.ಎಮ್. ಅಕ್ಕಿ, ಸಿಆರ್‌ಪಿ ಶ್ರೀನಿವಾಸ ಮತ್ತೂರ, ಉಮೇಶ ನೇಕಾರ, ಎನ್.ಎ. ಮುಲ್ಲಾ, ಎಸ್.ಎಚ್. ತಳವಾರ, ನಾಗನಗೌಡ್ರ ಲೆಕ್ಕದ, ಕಾಂತೇಶ ಮುದುಗಲ್ ಸೇರಿ 15 ಪ್ರೌಢಶಾಲೆಗಳ ವಿದ್ಯಾರ್ಥಿಗಳು ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಪಿ.ಎಸ್.ಬಿ.ಡಿ ಬಾಲಕಿಯರ ತಂಡ ಪ್ರಥಮ, ದಿ ಯೂನಿಕ್ ಆಂಗ್ಲ ಮಾಧ್ಯಮ ತಂಡ ದ್ವಿತೀಯ, ವಿದ್ಯಾಪೀಠ ಪಾಠಶಾಲೆ ತೃತೀಯ ಸ್ಥಾನ ಗಳಿಸಿದರು.

# ಬಿ.ಇಡಿ ದಾಖಲಾತಿ ಪರಿಶೀಲನೆ, ಪ್ರವೇಶ ಪ್ರಕ್ರಿಯೆ

■ವಿಜಯಸಾಕ್ಷಿ ಸುದ್ದಿ, ಗದಗ

2025ನೇ ಸಾಲಿನ ಬಿ.ಇಡಿ ದಾಖಲಾತಿ ಸಂಬಂಧ 3ನೇ ಪಟ್ಟಿಯ ಹಂಚಿಕೆ ಪ್ರಕಾರ ಸೇರ್ಪಡೆಯಾಗಿ ಉಳಿಕೆಯಾಗಿರುವ ಸೀಟುಗಳ ಕಾಲೇಜುವಾರು ಸೀಟ್ ಮ್ಯಾಟ್ರಿಕ್ಸನ್ನು 14/1/2026 https://schooleducation.karnataka.gov.in/ ದಾಖಲಾಗದ ಅಭ್ಯರ್ಥಿಗಳು 4ನೇ ಸುತ್ತಿನ ಸೀಟು ಹಂಚಿಕೆಗಾಗಿ ತಮ್ಮ ಅಭಿಮತವನ್ನು ದಾಖಲಿಸಲು 17/01/2026ರವರೆಗೆ ಅವಕಾಶ ಕಲ್ಪಿಸಿದ್ದು, https://sts.karnataka.gov.in/GPSTRHKರಲ್ಲಿ ಬಿಡುಗಡೆಗೊಳಿಸಿದೆ.

ಅಭ್ಯರ್ಥಿಗಳು ಹಂಚಿಕೆಯಾದ ಕಾಲೇಜುಗಳಿಗೆ ಸೇರಬಯಸಿದಲ್ಲಿ ಯೂಸರ್ ಐಡಿ ಮತ್ತು ಪಾಸ್‌ವರ್ಡ್‌ನ್ನು ಬಳಸಿ ನಿಗದಿತ ಶುಲ್ಕದ ಚಲನ್‌ನ್ನು ಮುದ್ರಿಸಿಕೊಂಡು ಭಾರತೀಯ ಸ್ಟೇಟ್ ಬ್ಯಾಂಕಿನ ಯಾವುದೇ ಶಾಖೆಯಲ್ಲಿ ಪಾವತಿಸಿ ಅದರ ಮೂಲ ಪ್ರತಿ ಹಾಗೂ ಇತರೆ ಎಲ್ಲಾ ಮೂಲ ದಾಖಲೆಗಳೊಂದಿಗೆ ಸಂಬಂಧಿಸಿದ ಜಿಲ್ಲಾ ನೋಡಲ್ ಕೇಂದ್ರಕ್ಕೆ ಹಾಜರಾಗಿ ಸಲ್ಲಿಸಿ 20/01/2026ರಿಂದ 23/01/2026ರೊಳಗೆ ದಾಖಲಾತಿ ಪತ್ರವನ್ನು ಪಡೆದುಕೊಂಡು, ನಿಗದಿತ ದಿನಾಂಕದೊಳಗೆ ಸಂಬಂಧಿಸಿದ ಕಾಲೇಜಿಗೆ ಸೇರ್ಪಡೆಗೊಳ್ಳಲು ಸೂಚಿಸಿದೆ.

ಪಟ್ಟಿಯಲ್ಲಿ ಮೊದಲ ಬಾರಿಗೆ ಹೆಸರು ಸೇರ್ಪಡೆಯಾಗಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಮಾತ್ರ ಹಂಚಿಕೆಯಾದ ಕಾಲೇಜಿಗೆ ಸೇರ್ಪಡೆಗೊಳ್ಳಲು ಬಯಸದೇ ಇದ್ದಲ್ಲಿ, ಯಾವುದೇ ಶುಲ್ಕವನ್ನು ಪಾವತಿಸದೇ, Opted for the Next Round' ಎಂದು ಅಭಿಮತವನ್ನು ಇದೇ ಅವಧಿಯಲ್ಲಿ ದಾಖಲಿಸಬೇಕು. ಇಂತಹ ಅಭ್ಯರ್ಥಿಗಳು, ಪಟ್ಟಿಯಲ್ಲಿ ಆಯ್ಕೆಯಾಗಿ ಗುರುತು ಬಂದು ಸೀಟು ಹಂಚಿಕೆಯಾಗದ ಅಭ್ಯರ್ಥಿಗಳು ಮತ್ತು ಹೆಸರು ಬಾರದಿರುವ ಅಭ್ಯರ್ಥಿಗಳಿಗೆ ಮಾತ್ರ ಮುಂದಿನ ಸುತ್ತಿನ ಆಯ್ಕೆಗೆ ಅವಕಾಶವನ್ನು ಕಲ್ಪಿಸಲಾಗುವುದು ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in ಜಾಲತಾಣವನ್ನು, ಡಯಟ್‌ನ ಗದಗ ನೋಡಲ್ ಅಧಿಕಾರಿ ಬಿ.ಎಫ್. ಅರವಟಗಿ ಮೊ.ನಂ–9482176932 ಅವರನ್ನು ಸಂಪರ್ಕಿಸಬಹುದಾಗಿದೆ.

## ರಾಜ್ಯದ ಇತಿಹಾಸದಲ್ಲಿ ರಾಜ್ಯದಲ್ಲಿ ಪ್ರಥಮ ಬಾರಿಗೆ ಏಕಕಾಲಕ್ಕೆ 42,345 ಮನೆಗಳ ವಿತರಣೆ

# ಜ. 24ರಂದು ಐತಿಹಾಸಿಕ ಬೃಹತ್ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮುಖ್ಯಮಂತ್ರಿಯವರ ವಿಶೇಷ ಅನುದಾನದಲ್ಲಿ ಪೂರ್ಣಗೊಂಡಿರುವ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮಂಡಳಿ ವತಿಯಿಂದ ರಾಜ್ಯಾದ್ಯಂತ ನಿರ್ಮಾಣಗೊಳ್ಳುತ್ತಿರುವ 1,80,253 ಮನೆಗಳ ಪೈಕಿ 2ನೇ ಹಂತದ 42,345 ಮನೆಗಳ ಲೋಕಾರ್ಪಣೆ ಕಾರ್ಯಕ್ರಮ ಜನವರಿ 24ರಂದು ನಡೆಯಲಿದೆ.

ಇಲ್ಲಿಯವರೆಗೆ ಒಟ್ಟು 3025 ಕೊಳಗೇರಿ ಪ್ರದೇಶಗಳನ್ನು ಗುರುತಿಸಲಾಗಿದ್ದು, ಅವುಗಳಲ್ಲಿ 2866 ಪ್ರದೇಶಗಳನ್ನು ಕೊಳಗೇರಿ ಪ್ರದೇಶವೆಂದು ಘೋಷಿಸಲಾಗಿದೆ. ಸದರಿ ಕೊಳಗೇರಿ ಪ್ರದೇಶಗಳಲ್ಲಿ ಮಂಡಳಿ ವತಿಯಿಂದ ಕೊಳಗೇರಿ ಸುಧಾರಣೆ ಯೋಜನೆಯಡಿ ಮೂಲಭೂತ ಸೌಲಭ್ಯ, ವಸತಿ ಯೋಜನೆಯಡಿ ಮನೆಗಳ ನಿರ್ಮಾಣ ಕೈಗೊಳ್ಳಲಾಗುತ್ತಿದೆ.

ಕೊಳಗೇರಿ ಪ್ರದೇಶಗಳಲ್ಲಿ ಕಚ್ಚಾ–ಗುಡಿಸಲುಗಳಲ್ಲಿ ವಾಸಿಸುತ್ತಿರುವ ನಿವಾಸಿಗಳನ್ನು ತೆರವುಗೊಳಿಸಿ ಅದೇ ಸ್ಥಳದಲ್ಲಿ in situ ಮಾದರಿಯಲ್ಲಿ



ವಸತಿ ಕಲ್ಪಿಸಲಾಗುತ್ತಿದೆ ಮತ್ತು ವಾಸಕ್ಕೆ ಯೋಗ್ಯವಲ್ಲದ ಪ್ರದೇಶಗಳಾದ ರೈಲ್ವೆ ಹಳಿಗಳ ಪಕ್ಕ, ಹೈಟೆನ್ಶನ್ ವಿದ್ಯುತ್ ತಂತಿಗಳ ಕೆಳಗೆ, ಕೆರೆ ಅಂಗಳ, ರಾಜಕಾಲುವೆ ಪಕ್ಕ ಮುಂತಾದ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳನ್ನು ಮಂಡಳಿಯ ಕಾಯ್ದೆ 11ರಡಿಯಲ್ಲಿ ಘೋಷಿಸಿ ಸರ್ಕಾರದಿಂದ ಬದಲಿ ಜಮೀನನ್ನು ಪಡೆದು, ಸ್ಥಳಾಂತರಿಸಿ Relocation ಮಾದರಿಯಲ್ಲಿ ಪುನರ್ ವಸತಿ ಕಲ್ಪಿಸಿ ಕೊಳಗೇರಿ ಮುಕ್ತ ಮಾಡಲು ಕ್ರಮ ವಹಿಸುತ್ತಿದೆ. ರಾಜ್ಯಾದ್ಯಂತ ವಿವಿಧ ನಗರ, ಪಟ್ಟಣಗಳ ವ್ಯಾಪ್ತಿಯಲ್ಲಿ ಬರುವ ಆಯ್ಕೆ ಘೋಷಿತ ಕೊಳಗೇರಿ ಪ್ರದೇಶಗಳನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಿ ಕೊಳಚೆ ಮುಕ್ತ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

2015–16ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಡಾ. ಅಂಬೇಡ್ಕರ್ ನಿವಾಸ್ ಯೋಜನೆ, ವಾಜಪೇಯಿ ನಗರ ವಸತಿ ಯೋಜನೆಯ ಸಂಯೋಜನೆಯೊಂದಿಗೆ ಜಾರಿಗೊಳಿಸಿದ್ದು, ಯೋಜನೆಯ

ಮಾರ್ಗಸೂಚಿಯನುಸಾರ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ರಾಜ್ಯಾದ್ಯಂತ ಬರುವ ನಗರ, ಪಟ್ಟಣಗಳಲ್ಲಿನ ಕೊಳಗೇರಿ ಪ್ರದೇಶಗಳಲ್ಲಿ ಮನೆಗಳ ಬೇಡಿಕೆ ಸಮೀಕ್ಷೆ ಕೈಗೊಂಡಿದ್ದು, ಒಟ್ಟು 4,92,256 ಕುಟುಂಬಗಳನ್ನು ಗುರುತಿಸಲಾಗಿದೆ. ಈ ಪೈಕಿ 1,80,253 ಮನೆಗಳ ನಿರ್ಮಾಣ ಮಂಜೂರಾತಿ ನೀಡಿರುವ ಒಟ್ಟಾರೆ ಯೋಜನೆಯ ಮಾರ್ಗಸೂಚಿಯನುಸಾರ ಮಂಜೂರಾದ ಮನೆಗಳ ಘಟಕ ವೆಚ್ಚ ಸರಾಸರಿ ರೂ.7.52 ಲಕ್ಷಗಳಾಗಿದ್ದು, ಕೇಂದ್ರ ಸರ್ಕಾರದ ರೂ.1.50 ಲಕ್ಷಗಳು ಮತ್ತು ರಾಜ್ಯ ಸರ್ಕಾರದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗಕ್ಕೆ ರೂ.2 ಲಕ್ಷಗಳು ಹಾಗೂ ಇತರೇ ವರ್ಗಕ್ಕೆ ರೂ.1.20 ಲಕ್ಷಗಳು ಮತ್ತು ಫಲಾನುಭವಿಗಳ ವಂತಿಕೆ ಮೊತ್ತವನ್ನು ಫಲಾನುಭವಿಗಳೇ ಸ್ವತಃ ಭರಿಸುವುದು ಅಥವಾ ಬ್ಯಾಂಕ್‌ಗಳಿಂದ, ಫಲಾನುಭವಿಗಳ ಹೆಸರಿನಲ್ಲಿ ಸಾಲಸೌಲಭ್ಯ ನಿರ್ಮಾಣವನ್ನು ಪೂರ್ಣಗೊಳಿಸಬೇಕಾಗಿತ್ತು.

ಈ ಪೈಕಿ ಫಲಾನುಭವಿಗಳ ವಂತಿಕೆಗೆ ಎದುರಾಗಿ ರೂ.960.75 ಕೋಟಿಗಳನ್ನು ಮತ್ತು ಮೂಲಭೂತ ಸೌಲಭ್ಯ ಒದಗಿಸಲು ರೂ.174.64 ಕೋಟಿಗಳನ್ನು ಸರ್ಕಾರದಿಂದ ಬಿಡುಗಡೆಗೊಳಿಸಲಾಗಿದೆ. ಬಿಡುಗಡೆಗೊಳಿಸಲಾದ ಕೇಂದ್ರ, ರಾಜ್ಯ ಮತ್ತು ಫಲಾನುಭವಿ ವಂತಿಕೆಗಾಗಿ ರಾಜ್ಯ ಸರ್ಕಾರದಿಂದ ಅನುದಾನ ಹಾಗೂ ಫಲಾನುಭವಿಗಳಿಂದ ಸಂಗ್ರಹಿಸಲಾದ ಮೊತ್ತವನ್ನು ಬಳಸಿಕೊಂಡು ಈ ಯೋಜನೆಯಡಿ ಒಟ್ಟು 86,651 ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ಈ ಪೈಕಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 42,190 ಮನೆಗಳು ಮತ್ತು ಇತರೆ ವರ್ಗದ 44,461 ಮನೆಗಳನ್ನು ಪೂರ್ಣಗೊಳಿಸಲಾಗಿದೆ.

> ಯೋಜನೆಯಡಿ ಪೂರ್ಣಗೊಂಡಿರುವ ಮನೆಗಳ ಪೈಕಿ 36,789 ಮನೆಗಳನ್ನು ಪ್ರಥಮ ಹಂತದಲ್ಲಿ ಮುಖ್ಯಮಂತ್ರಿಯವರಿಂದ ಮಾರ್ಚ್–2024ರಲ್ಲಿ ಲೋಕಾರ್ಪಣೆ ಮಾಡಲಾಗಿದ್ದು, ಪ್ರಸ್ತುತ 42,345 ಮನೆಗಳನ್ನು 2ನೇ ಹಂತದಲ್ಲಿ ಲೋಕಾರ್ಪಣೆ ಮಾಡಲಾಗುತ್ತಿದೆ.

# ನೂತನ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಮರಾಠಾ ವಿದ್ಯಾವರ್ಧಕ ಸಂಘದ ಮಹಿಳಾ ಮಂಡಳ ವತಿಯಿಂದ ಶ್ರೀ ರಾಜ ಮಾತಾ ಜೀಜಾಬಾಯಿ ಜಯಂತಿ ಆಚರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ನೂತನವಾಗಿ ಮಹಿಳಾ ಮಂಡಳವನ್ನು ರಚಿಸಲಾಯಿತು. ಶ್ರೀ ರಾಜಮಾತಾ ಜೀಜಾಬಾಯಿ ಮಹಿಳಾ ಮಂಡಳ ನೂತನ ಅಧ್ಯಕ್ಷರಾಗಿ ಅಶ್ವಿನಿ ವಿ.ಜಗತಾಪ, ಗೌರವ ಅಧ್ಯಕ್ಷರಾಗಿ ಶೃತಿ ವಿ.ಗ್ವಾರಿ, ಉಪಾಧ್ಯಕ್ಷರಾಗಿ ಕೋಕಿಲಾ ಸು. ಘೋರ್ಪಡೆ ಮತ್ತು ಸುಜಾತಾ ಅ.ಮರೋಳ, ಕಾರ್ಯದರ್ಶಿಗಳಾಗಿ ರೂಪಾ ವಾ.ಮಾಡಿಕ, ಸಹ–ಕಾರ್ಯದರ್ಶಿಗಳಾಗಿ ಮಾಲಾಶ್ರೀ ಕೃ.ಜಾಧವ ಇವರು ಆಯ್ಕೆಯಾದರು.

# ಗಣಹೋಮದಿಂದ ಸರ್ವ ಕಾರ್ಯಗಳು ನಿರ್ವಿಘ್ನ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾವು ಯಾವುದೇ ಕಾರ್ಯವನ್ನು ಮಾಡುವ ಮುಂಚೆ ವಿಘ್ನನಿವಾರಕನಾದ ಶ್ರೀ ಗಣೇಶನನ್ನು ಪೂಜಿಸುತ್ತೇವೆ, ಪ್ರಾರ್ಥಿಸುತ್ತೇವೆ. ಇದರೊಂದು ಗಣಹೋಮವನ್ನೂ ನೆರವೇರಿಸಿದರೆ ಮಾಡುವ ಕಾರ್ಯಗಳೆಲ್ಲವೂ ನಿರ್ವಿಘ್ನವಾಗಿ ಜರುಗುತ್ತವೆ ಎಂದು ಶ್ರೀ ದತ್ತಾತ್ರೇಯ ದೇವಸ್ಥಾನದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಗುರುವಾರದಿಂದ ಪ್ರಾರಂಭವಾದ ಶ್ರೀಗುರು ದತ್ತಾತ್ರೇಯರ 116ನೇ ವರ್ಷದ ಶ್ರೀಗುರು ಪ್ರತಿಪದೆ ಉತ್ಸವದ ನಿಮಿತ್ತ ಜರುಗಿದ ಗಣಹೋಮಕ್ಕೆ ಪೂರ್ಣಾಹುತಿ ಅರ್ಪಿಸಿದ ನಂತರ ಅವರು ಮಾತನಾಡಿದರು.


ಗಣೇಶನು ವಿಘ್ನನಿವಾರಕನೂ ಆಗಿರುವುದರಿಂದ ಎಲ್ಲ ಪೂಜೆಗಳಿಗಿಂತ ಮೊದಲು ಅವನ ಪೂಜೆಗೆ ಅಗ್ರ ಸ್ಥಾನವಿದೆ. ವಿದ್ಯಾರ್ಥಿಗಳ ವಿದ್ಯಾಭ್ಯಾಸವು ನಿರ್ವಿಘ್ನವಾಗಿ ನಡೆಯಲೂ ಸಹ ಈತನ ಪೂಜೆಯೇ ಆಗಬೇಕು.



ಗಣೇಶನನ್ನು ಭಕ್ತಿಯಿಂದ ಪೂಜಿಸಿದರೆ ಖಂಡಿತ ಅವನು ಬೇಡಿದ ವರಗಳನ್ನು ನೀಡಿ ಆಶೀರ್ವದಿಸುತ್ತಾನೆ ಎಂದು ಹೇಳಿದರು.

ಗಣಹೋಮವನ್ನು ಬಿ.ಎಲ್. ಕುಲಕರ್ಣಿ ದಂಪತಿಗಳು ನೆರವೇರಿಸಿದರು. ಈ ಸಂದರ್ಭದಲ್ಲಿ ಅರುಣ ಗ್ರಾಮಪುರೋಹಿತ, ಪ್ರಶಾಂತ ಗ್ರಾಮಪುರೋಹಿತ, ರಾಮಕೃಷ್ಣ ಸದರಜೋಷಿ, ಜಗನ್ನಾಥ ಸೂರಭಟ್ಟನವರ, ಅರುಣ ಜಿ.ಕುಲಕರ್ಣಿ(ಕುರಗಡ್ಡಿ), ಮಂಜುನಾಥ ಕುಲಕರ್ಣಿ, ಅಜಿತ ಕುಲಕರ್ಣಿ, ನಾಗರಾಜ ನಾಡಿಗೇರ, ಶ್ರೀಧರ ಗ್ರಾಮಪುರೋಹಿತ, ಎಸ್. ಎಚ್. ಕುಲಕರ್ಣಿ, ರಘುನಾಥ ಕೊಂಡಿ, ಆನಂದ ಕಾಳೆ, ವಿನಾಯಕ ಗ್ರಾಮಪುರೋಹಿತ, ಅರುಣ ಕುಲಕರ್ಣಿ, ಡಾ. ಕೃಷ್ಣಾ ಕಾಳೆ, ಕೆ.ಬಿ. ದೇಸಾಯಿ, ಬಾಬುರಾವ ಕಾಳೆ, ರಂಗನಾಥ ಕುಲಕರ್ಣಿ, ಪ್ರಕಾಶ ಕಾಳೆ, ಪ್ರತೀಕ್ಷಾ ಕುಲಕರ್ಣಿ, ರಾಜಶ್ರೀ ಕುಲಕರ್ಣಿ, ಪದ್ಮಾ ಕುಲಕರ್ಣಿ, ವೀಣಾ ಕುಲಕರ್ಣಿ, ಜ್ಯೋತಿ ನಾಡಿಗೇರ, ಶೋಭಾ ಸೂರಭಟ್ಟನವರ, ಶೋಭಾ ಕುಲಕರ್ಣಿ, ಪ್ರಿಯಾ ಕುಲಕರ್ಣಿ, ಸಂಧ್ಯಾ ಕುಲಕರ್ಣಿ, ನಿಖಿತಾ ಗ್ರಾಮಪುರೋಹಿತ, ಅನಿತಾ ಗ್ರಾಮಪುರೋಹಿತ, ಸೀಮಾ ಕೊಂಡಿ, ರೂಪಾ ಗ್ರಾಮಪುರೋಹಿತ, ಭಾರತಿಬಾಯಿ ಗ್ರಾಮಪುರೋಹಿತ, ದೀಪಾ ಕುಲಕರ್ಣಿ, ಸನ್ಮತಿ ಸದರಜೋಷಿ, ಅರ್ಚನಾ ಕುಲಕರ್ಣಿ, ಡಾ. ಸಪ್ನಾ ಕಾಳೆ, ಲಕ್ಷ್ಮೀ ಗ್ರಾಮಪುರೋಹಿತ, ರೇಣುಕಾ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ ಮುಂತಾದವರಿದ್ದರು.

# ಭಜನೆಯಿಂದ ಮನಸ್ಸಿಗೆ ನೆಮ್ಮದಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿತ್ಯವೂ ಭಜನೆ ಮಾಡುವುದರಿಂದ ಮನಸ್ಸಿಗೆ ನೆಮ್ಮದಿ ಸಿಗುತ್ತದೆ. ಆದ್ದರಿಂದ ನಮ್ಮ ದೇಶದ ಪಿತಾಮಹ ಮಹಾತ್ಮ ಗಾಂಧೀಜಿಯವರು ಪ್ರಾರ್ಥನೆಗೆ ವಿಶೇಷ ಸ್ಥಾನವನ್ನು ನೀಡಿದ್ದರು ಎಂದು ನಿವೃತ್ತ ಉಪನ್ಯಾಸಕ ಎಸ್. ಎಚ್. ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಪ್ರಾರಂಭವಾಗಿರುವ ಶ್ರೀ ಗುರು ದತ್ತಾತ್ರೇಯನ ಉತ್ಸವದಲ್ಲಿ ನರೇಗಲ್ಲದ ಶ್ರೀ ಅನುಸೂಯಾ ಮಂಡಳದವರ ಸಾಮೂಹಿಕ ಭಜನೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಭಗವಂತನ ಸ್ಮರಣೆಯನ್ನು ನಿತ್ಯವೂ ಮಾಡುವುದರಿಂದ ನಮ್ಮ ಮನದ ಕ್ಲೇಷ ದೂರವಾಗುತ್ತದೆ. ಮನೆಯಲ್ಲಿ ಸಮಾಧಾನದ ಸ್ಥಿತಿ ನಿರ್ಮಾಣವಾಗುತ್ತದೆ. ಭಜನೆಯಿಂದ ನಾವೆಲ್ಲರೂ ಒಂದೇ ಎನ್ನುವ ಭಾವನೆ ಬರುತ್ತದೆ. ಇದರಿಂದ ಸಮಾಜದಲ್ಲಿನ ಒಗ್ಗಟ್ಟು ನಿರ್ಮಾಣವಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಅನಸೂಯಾ ಮಹಿಳಾ ಭಜನಾ ಮಂಡಳಿಯಲ್ಲಿ ಸಂಧ್ಯಾ ಕುಲಕರ್ಣಿ, ನಿಖಿತಾ ಗ್ರಾಮಪುರೋಹಿತ, ಅನಿತಾ ಗ್ರಾಮಪುರೋಹಿತ, ಸೀಮಾ ಕೊಂಡಿ, ರೂಪಾ ಗ್ರಾಮಪುರೋಹಿತ, ಭಾರತಿಬಾಯಿ ಗ್ರಾಮಪುರೋಹಿತ, ದೀಪಾ ಕುಲಕರ್ಣಿ, ಸನ್ಮತಿ ಸದರಜೋಷಿ, ಅರ್ಚನಾ ಕುಲಕರ್ಣಿ, ಡಾ. ಸಪ್ನಾ ಕಾಳೆ, ಲಕ್ಷ್ಮೀ ಗ್ರಾಮಪುರೋಹಿತ, ರೇಣುಕಾ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ಪ್ರತೀಕ್ಷಾ ಕುಲಕರ್ಣಿ, ರಾಜಶ್ರೀ ಕುಲಕರ್ಣಿ, ಪದ್ಮಾ ಕುಲಕರ್ಣಿ, ವೀಣಾ ಕುಲಕರ್ಣಿ, ಜ್ಯೋತಿ ನಾಡಿಗೇರ, ಶೋಭಾ ಸೂರಭಟ್ಟನವರ, ಶೋಭಾ ಕುಲಕರ್ಣಿ, ಪ್ರಿಯಾ ಕುಲಕರ್ಣಿ, ಪರಿಮಳಾ ಗ್ರಾಮಪುರೋಹಿತ ಇದ್ದರು.

ಶ್ರೀ ಗಜಾನನ ಸ್ತುತಿಯೊಂದಿಗೆ ಭಜನಾ ಕಾರ್ಯಕ್ರಮವನ್ನು ಪ್ರಾರಂಭಿಸಿದ ಮಹಿಳೆಯರು ಹಲವು ಹಾಡುಗಳ ಮೂಲಕ ಭಕ್ತರ ಮನ ತಣಿಸಿದರು.

ಕಾರ್ಯಕ್ರಮದಲ್ಲಿ ಶಾರದಾಬಾಯಿ ಗ್ರಾಮಪುರೋಹಿತ, ಭಾಗ್ಯಾಬಾಯಿ ಕಾಳೆ, ಕವಿತಾ ಕುಲಕರ್ಣಿ, ಕಮಲಾಬಾಯಿ ಸದರಜೋಷಿ, ಶ್ರೇಯಾ ಕುಲಕರ್ಣಿ, ಪ್ರಿಯಾ ನಾಡಿಗೇರ, ವೇದಾ ಸದರಜೋಷಿ, ತನುಜಾ ಜೋಷಿ ಮುಂತಾದವರಿದ್ದರು.




ಸೋಲಿಡಾರಿಟಿ ಯೂಥ್ ಮೂವ್ಮೆಂಟ್ ಗದಗ ವತಿಯಿಂದ ಕರ್ನಾಟಕ ರಾಜ್ಯ ಯುವ ಆಯೋಗವನ್ನು ತಕ್ಷಣ ಸ್ಥಾಪಿಸಲು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಇವರಿಗೆ ಗದಗ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ನಗರಾಧ್ಯಕ್ಷರಾದ ಮೊಹಮ್ಮದ್ ಯೂಸುಫ್ ಮುಲ್ಲಾ, ಕಾರ್ಯದರ್ಶಿಗಳಾದ ರಿಯಾಜ ಶೇಖ್, ಸದಸ್ಯರುಗಳಾದ ಜಾವೇದ್ ಉಮಚಗಿ, ಸಾಧಿಕ್ ಖಾಸಿಂ ದರ್ಗಾದ, ಮೆಹಬೂಬ್ ಅಲಿ, ತಾಹಿರ್ ಡಂಬಳ, ವಾಸಿಂಅಕ್ರಮ ನದಾಫ್, ಮುನ್ನಾ ಕಲ್ಮನಿ, ಹಜರತ್ ಪಟ್ಟಣದ ಉಪಸ್ಥಿತರಿದ್ದರು.

# ಸಮಸಮಾಜ ನಿರ್ಮಾತೃ ಅಂಬಿಗರ ಚೌಡಯ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮಾಜದ ಅಂಕು–ಡೊಂಕುಗಳನ್ನು ತಿದ್ದಿದ ಸಮಸಮಾಜ ನಿರ್ಮಾತೃ ನಿಜ ಶರಣ ಅಂಬಿಗರ ಚೌಡಯ್ಯ ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಅವರು ಪಟ್ಟಣದ ನಿಜ ಶರಣ ಅಂಬಿಗರ ಚೌಡಯ್ಯ ಸಮುದಾಯ ಭವನದಲ್ಲಿ ಮುಳಗುಂದ ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ಅಂಬಿಗರ ಚೌಡಯ್ಯ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಅಂಬಿಗರ ಚೌಡಯ್ಯ ಸಮಸಮಾಜ ನಿರ್ಮಾಣ ಮಾಡಲು ಅತ್ಯಂತ ಕಠೋರ ವಚನಗಳ ಮೂಲಕ ಶ್ರಮಿಸಿದರು. ಅವರ ವಚನ ಸಾಹಿತ್ಯ ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದರು.

ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ ಮಾತನಾಡಿ, 12ನೇ ಶತಮಾನದಲ್ಲಿನ ಶರಣ, ಶರಣೆಯರು ಸಮಸಮಾಜ ನಿರ್ಮಿಸಲು ಸಾಕಷ್ಟು ಅವಮಾನಗಳನ್ನು ಎದುರಿಸಿ, ಎಲ್ಲರೂ ಒಂದು ಎಂದು ಬಾಳಿ ಬದುಕಿದವರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗಬೇಕು, ಮಕ್ಕಳಿಗೆ ಶರಣರ ತತ್ವ ಸಿದ್ಧಾಂತಗಳನ್ನು ಕಲಿಸುವ ಅಗತ್ಯವಿದ್ದು, ನಾವೆಲ್ಲರೂ ಜಾತಿ, ಮತ, ಪಂಥ ಮರೆತು ಸುಂದರ ಸಮಾಜ ನಿರ್ಮಿಸೋಣ ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ನಿಜ ಶರಣ ಅಂಬಿಗರ ಚೌಡಯ್ಯನವರ ವಚನ ಸಾಹಿತ್ಯ ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿದ್ದು, ಮಕ್ಕಳಿಗೆ ನಿತ್ಯ ವಚನಗಳನ್ನು ಪಠಿಸಲು ಹೇಳಬೇಕು ಎಂದರು.

ಅಧ್ಯಕ್ಷತೆಯನ್ನು ರಾಜು ಬಾರಕೇರ ವಹಿಸಿದ್ದರು. ಕಾಶೀನಾಥ ಮರಿದೇವರಮಠ, ಸಂಗಮೇಶ ಹಾದಿಮನಿ, ಶಂಕ್ರಪ್ಪ ಧರ್ಮಣ್ಣವರ, ಪ್ರಕಾಶ ಮದ್ದಿನ, ಬೂದಪ್ಪ ಹಳ್ಳಿ, ಮಾಹಾಂತೇಶ ದಿವಟರ, ಮಂಜುನಾಥ ಮಟ್ಟಿ, ಬಿ.ಜಿ. ಯಳವತ್ತಿ, ಶೋಭಾ ಪಾಟೀಲ ಇದ್ದರು.

# ಹಠಯೋಗಿ ವೀರಪ್ಪಜ್ಜನ ತೊಟ್ಟಿಲೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೀವನವು ಶಾಶ್ವತವಲ್ಲ, ಅದು ಅಲ್ಪಕಾಲಿಕ ಮತ್ತು ಕ್ಷಣಭಂಗುರ ಎಂಬುದಾಗಿದೆ. ಈ ಅರಿವಿನಿಂದ ಮನುಷ್ಯನು ಅಹಂಕಾರ, ಮೋಹಗಳಿಂದ ದೂರವಾಗಿ, ಜೀವನದ ಸತ್ಯವನ್ನು ಅರ್ಥಮಾಡಿಕೊಂಡು ಜಾಗೃತರಾಗಿ, ಸಾರ್ಥಕ ಕೆಲಸಗಳಲ್ಲಿ ತೊಡಗಬೇಕು ಎಂದು ಕಲ್ಲಿಗನೂರು–ಅಣ್ಣಿಗೇರಿಯ ವೀರಪ್ಪಜ್ಜನ ಮಠದ ಷಣ್ಮುಖಪ್ಪಜ್ಜನವರು ಹೇಳಿದರು.

ಸಮೀಪದ ಕೋಡಿಕೊಪ್ಪ ಗ್ರಾಮದಲ್ಲಿ ಬುಧವಾರ ಸಂಜೆ ಹಠಯೋಗಿ ಶ್ರೀ ವೀರಪ್ಪಜ್ಜನ ಪುರಾಣದಲ್ಲಿ ವೀರಪ್ಪಜ್ಜನ ತೊಟ್ಟಿತೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಜೀವನವು ಹುಟ್ಟು ಮತ್ತು ಸಾವುಗಳ ನಡುವಿನ ಒಂದು ಸಣ್ಣ ಅವಧಿ ಮಾತ್ರ, ಅದು ಎಂದಿಗೂ ಶಾಶ್ವತವಲ್ಲ. ಜೀವನವು ತಾತ್ಕಾಲಿಕ ಎಂಬ ಅರಿವು ಇದ್ದಾಗ, ಮನುಷ್ಯನು ನಿಜವಾದ ಜಾಗೃತಿಯನ್ನು ಪಡೆಯುತ್ತಾನೆ ಮತ್ತು ಜೀವನದ ಪ್ರತಿ ಕ್ಷಣವನ್ನೂ ಆನಂದಿಸುತ್ತಾನೆ. ನಾನು–ನನ್ನದ ಎಂಬ ಭಾವನೆಗಳನ್ನು ಬಿಟ್ಟು, ಸಂಪತ್ತು ಮತ್ತು ಅಧಿಕಾರದ ಮೋಹಕ್ಕೆ ಬೀಳಬಾರದು. ಈ ಅಲ್ಪಕಾಲದ ಬದುಕಿನಲ್ಲಿ ಏನನ್ನಾದರೂ ಸಾಧಿಸಬೇಕು, ಸಮಾಜಕ್ಕೆ ಉಪಯುಕ್ತವಾದ ಕೆಲಸಗಳನ್ನು ಮಾಡಬೇಕು. ಜೀವನದ ನಶ್ವರತೆಯ ಅರಿವು ನಮ್ಮನ್ನು ಹೆಚ್ಚು ಜವಾಬ್ದಾರಿಯುತ ಮತ್ತು ಸಾರ್ಥಕ ಜೀವನ ನಡೆಸಲು ಪ್ರೇರೇಪಿಸುತ್ತದೆ. ಅದನ್ನೇ ಕೋಡಿಕೊಪ್ಪದ ಹಠಯೋಗಿ ವೀರಪ್ಪಜ್ಜ 'ಯಾವುದು ಹೌದು ಅದು ಅಲ್ಲ, ಯಾವುದು ಅಲ್ಲ ಅದು ಹೌದು' ಎಂಬ ವಾಣಿಯ ಮೂಲಕ ನಮಗೆ ತಿಳಿಸಿದ್ದಾನೆ ಎಂದರು.

ಬಿ.ಜಿ. ಹಳ್ಳೂರ, ಬಸನಗೌಡ ಉದ್ದಣ್ಣವರ, ಕಲ್ಲಯ್ಯ ಹಿರೇಮಠ, ನೂರಂದಯ್ಯ ಕೌಡಿಕಾಯಿ ಸೇರಿದಂತೆ ಇತರರಿದ್ದರು. ವೀರೇಶ ಬಿನ್ನಾಳಮಠ ನಿರ್ವಹಿಸಿದರು.



# ಯಶಸ್ವಿನಿ ಯೋಜನೆಯಡಿ ನೋಂದಣಿ ಮಾಡಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

2025-26 ನೇ ಸಾಲಿಗೆ ಸಹಕಾರ ಇಲಾಖೆಯಿಂದ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಜಾರಿಗೊಳಿಸಿ ಆದೇಶ ಮಾಡಲಾಗಿದೆ.

ಯಶಸ್ವಿನಿ ಯೋಜನೆಯಡಿಯಲ್ಲಿ ಸದಸ್ಯರನ್ನು ಹೊಸದಾಗಿ ನೋಂದಾಯಿಸಲು ಮತ್ತು ಕಳೆದ ಸಾಲಿನಲ್ಲಿ ನೋಂದಾಯಿಸಿದ ಸದಸ್ಯರನ್ನು ನವೀಕರಿಸಲು ಅವಕಾಶವಿದ್ದು, ದಿ: 03-01-2026 ರಿಂದ 31-03-2026 ರವರೆಗೆ ಅವಧಿ ಇರುತ್ತದೆ. ಸಹಕಾರ ಸಂಘ/ಸೌಹಾರ್ದ ಸಹಕಾರಿಗಳು/ಸಹಕಾರ ಬ್ಯಾಂಕ್‌ಗಳು ಮತ್ತು ಗ್ರಾಮೀಣ ಸ್ವ-ಸಹಾಯ ಗುಂಪುಗಳಲ್ಲಿರುವ ಸದಸ್ಯರು ಕನಿಷ್ಠ 01 ತಿಂಗಳು ಮುಂಚೆ ಸದಸ್ಯತ್ವವನ್ನು ಹೊಂದಿರಬೇಕು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಸದಸ್ಯರಿಗೆ ನೋಂದಾಯಿಸಲು ಉಚಿತವಾಗಿರುತ್ತದೆ.

ಯಶಸ್ವಿನಿ ಯೋಜನೆಯಡಿಯಲ್ಲಿ ಹೊಸದಾಗಿ ನೋಂದಾಯಿಸಲು ಮತ್ತು ಕಳೆದ ಸಾಲಿನಲ್ಲಿ ಈ ಯೋಜನೆಯಡಿ ನೋಂದಾಯಿಸಿರುವ ಸದಸ್ಯರನ್ನು ನವೀಕರಿಸಿ ಸದರಿ ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳಬಹುದು ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ-125 ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಎ.ಪಿ.ಎಂ.ಸಿ. ಯಾರ್ಡ್, ಎಸ್.ಬಿ.ಆಯ ಮುಖ್ಯ ಶಾಖೆ ಎದುರಿಗೆ, ಗದಗ ದೂರವಾಣಿ ಸಂಖ್ಯೆ-08372-238598, ಹಾಗೂ ತಾಲೂಕಾ ಸಹಕಾರ ಅಭಿವೃದ್ಧಿ ಅಧಿಕಾರಿ, ನರಗುಂದ-8660099227, ಶಿರಹಟ್ಟಿ-9739247088, ರೋಣ-9538198110, ಮುಂಡರಗಿ-8088386791, ಗದಗ-9945187724.

**ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಲ್ಲಿ ಪರೀಕ್ಷಾ ಭಯ, ಒತ್ತಡ ನಿವಾರಣೆಗೆ ಒತ್ತು | ವಿದ್ಯಾರ್ಥಿಗಳಿಗೆ ಶಿಕ್ಷಕರಿಂದ ವೇಕ್‌ಅಪ್ ಕಾಲ್**

# ಫಲಿತಾಂಶ ಸುಧಾರಣೆಗೆ 29 ಅಂಶಗಳ ಯೋಜನೆ



ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಅನೇಕ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಪ್ರತಿ ದಿನ ಎರಡರಿಂದ ಮೂರು ಶಾಲೆಗಳಿಗೆ ಭೇಟಿ ನೀಡಿ ಎಸ್‌ಎಸ್‌ಎಲ್‌ಸಿ ಮಕ್ಕಳ ಕಲಿಕಾ ಮಟ್ಟವನ್ನು ಪರೀಕ್ಷಿಸುತ್ತಿದ್ದೇನೆ. ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳನ್ನು ಶಿಕ್ಷಕರಿಗೆ ದತ್ತು ನೀಡಲಾಗಿದೆ. ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳನ್ನು ಉಪನ್ಯಾಸಕರು ಮತ್ತು ವಿಷಯ ಪರಿವೀಕ್ಷಕರಿಗೆ ಮೇಲ್ವಿಚಾರಣಾ ಅಧಿಕಾರಿಗಳಿಗೆ ದತ್ತು ನೀಡಲಾಗಿದೆ.

**– ಆರ್.ಎಸ್. ಬುರಡಿ.**
ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ.

■ ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ ಜಿಲ್ಲೆಯ ಮುಂಡರಗಿ, ಗದಗ, ನರಗುಂದ, ರೋಣ, ಶಿರಹಟ್ಟಿ, ಲಕ್ಷ್ಮೇಶ್ವರ ಮತ್ತು ಗಜೇಂದ್ರಗಡ ತಾಲೂಕುಗಳಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಎರಡಂಕಿಯಿಂದ ಒಂದಂಕಿಯೊಳಗೆ ತರಲು ಶ್ರಮಿಸುತ್ತಿರುವ ಶಿಕ್ಷಣ ಇಲಾಖೆ, ಅದಕ್ಕಾಗಿ ಹಲವು ವಿನೂತನ ಕಾರ್ಯ ಕ್ರಮಗಳನ್ನು ಕೈಗೊಂಡಿದೆ. ಈಗಾಗಲೇ ಶಾಲೆಗಳಲ್ಲಿ 29 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೊಳಿಸಿರುವ ಇಲಾಖೆ ವಿದ್ಯಾರ್ಥಿಗಳಲ್ಲಿ ಪರೀಕ್ಷಾ ಭಯ ಮತ್ತು ಒತ್ತಡ ನಿವಾರಣೆಗೆ ವಿಶೇಷ ಒತ್ತು ಕೊಟ್ಟಿದೆ.

2024-25ರಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಗದಗ ಜಿಲ್ಲೆ 17ನೇ ಸ್ಥಾನ ಗಳಿಸಿದೆ. ಪರೀಕ್ಷೆಗೆ ಹಾಜರಾದ 15,545 ವಿದ್ಯಾರ್ಥಿಗಳ ಪೈಕಿ 11,621 ವಿದ್ಯಾರ್ಥಿಗಳು ಪಾಸಾಗಿದ್ದು ಶೇ 74.76ರಷ್ಟು ಫಲಿತಾಂಶ ದಾಖಲಾದರೆ, 2025ರ ಫಲಿತಾಂಶದ ಪ್ರಕಾರ ಜಿಲ್ಲೆಯು ಶೇ. 67.7ರಷ್ಟು ಉತ್ತೀರ್ಣತೆಯ ಪ್ರಮಾಣದೊಂದಿಗೆ 17ನೇ ಸ್ಥಾನವನ್ನು ಉಳಿಸಿಕೊಂಡಿದೆ. ಈ ವರ್ಷ ಎರಡಂಕಿ ಸ್ಥಾನವನ್ನು ಒಂದಂಕಿಗೆ ಇಳಿಸುವ ಗುರಿ ಹೊಂದಿರುವ ಇಲಾಖೆ, ಈ ನಿಟ್ಟಿನಲ್ಲಿ ಸಮರೋಪಾದಿಯಲ್ಲಿ ಯೋಜನೆಗಳನ್ನು ಕಾರ್ಯರೂಪಕ್ಕೆ ತರುತ್ತಿದೆ.

2026ರಲ್ಲಿ ಗದಗ-4865, ಮುಂಡರಗಿ-1906, ನರಗುಂದ-1416, ರೋಣ-3783, ಶಿರಹಟ್ಟಿ-2698 ಹೀಗೆ ಒಟ್ಟು 14665 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲಿದ್ದಾರೆ.

29 ಅಂಶಗಳ ಕಾರ್ಯಕ್ರಮದ ಪೈಕಿ ಪ್ರಮುಖವಾಗಿ ಡಿಸೆಂಬರ್ ಅಂತ್ಯದೊಳಗೆ ಎಲ್ಲ ಪಠ್ಯ ವಿಷಯಗಳ ಬೋಧನೆ ಪೂರ್ಣಗೊಳಿಸಲಾಗಿದೆ. ಪ್ರತಿದಿನ ಶಾಲೆ, ಕಾಲೇಜು ಅವಧಿಯ ಮೊದಲು ಮತ್ತು ನಂತರ ಒಂದು ವಿಷಯಕ್ಕೆ ವಿಶೇಷ ತರಗತಿ ನಡೆಸಲಾಗುತ್ತಿದೆ. ವಿದ್ಯಾರ್ಥಿಗಳು ಓದಿನಲ್ಲಿ ತೊಡಗುತ್ತಿರುವುದನ್ನು ಪರಿಶೀಲಿಸಲು ಪ್ರತಿ ದಿನ ಮುಂಜಾನೆ ಮತ್ತು ಸಂಜೆ ಶಿಕ್ಷಕರು ವೇಕ್ ಅಪ್ ಕಾಲ್ ಮಾಡುತ್ತಿದ್ದಾರೆ.

ಕಲಿಕೆಯಲ್ಲಿ ಸರಾಸರಿ, ಸರಾಸರಿಗಿಂತ ಕಡಿಮೆ ಮತ್ತು ಸರಾಸರಿಗಿಂತ ಉತ್ತಮವಾಗಿರುವ ವಿದ್ಯಾರ್ಥಿಗಳ ಗುಂಪುಗಳನ್ನು ಪ್ರತ್ಯೇಕವಾಗಿ ರಚಿಸಿ ಪ್ರತಿ ಶಿಕ್ಷಕರಿಗೆ ಸಮನಾಗಿ ವಿದ್ಯಾರ್ಥಿಗಳನ್ನು ನೀಡಲಾಗಿದೆ. ಪ್ರತಿ 15 ದಿನಗಳಿಗೊಮ್ಮೆ ಪೋಷಕರ ಸಭೆ ನಡೆಸಿ ಮಕ್ಕಳ ಕಲಿಕಾ ಪ್ರಗತಿ ಒಪ್ಪಿಸುವ ಕಾರ್ಯವನ್ನು ಪ್ರೌಢಶಾಲಾ ಶಿಕ್ಷಕರು ಮತ್ತು ಪಿಯು ಕಾಲೇಜು ಉಪನ್ಯಾಸಕರು ಮಾಡುತ್ತಿದ್ದಾರೆ.

ನಿರಂತರವಾಗಿ ಶಾಲೆಗೆ ಗೈರು ಹಾಜರಾಗುವ ವಿದ್ಯಾರ್ಥಿಗಳ ಕೇಸ್ ಸ್ಟಡಿ ನಡೆಸಿ ಪರಿಹಾರ ಕ್ರಮವನ್ನು ಶಿಕ್ಷಣ ಇಲಾಖೆ ಅಧಿಕಾರಿಗಳು ಕೈಗೊಂಡಿದ್ದಾರೆ. ವಿದ್ಯಾರ್ಥಿಗಳ ಗುಂಪುಗಳನ್ನು ರಚಿಸಿ ಪ್ರತಿ ಶಿಕ್ಷಕರಿಗೆ ಸಮಾನವಾಗಿ ವಿದ್ಯಾರ್ಥಿಗಳನ್ನು ದತ್ತು ನೀಡುವ ಪ್ರಕ್ರಿಯೆಯೂ ನಡೆಯುತ್ತಿದೆ. ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷವಾಗಿ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಅಲ್ಲದೆ ಉಪನ್ಯಾಸಕರು ಹಾಗೂ ವಿಷಯ ಪರಿವೀಕ್ಷಕರಿಗೆ ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳನ್ನು ದತ್ತು ನೀಡಲಾಗುತ್ತಿದೆ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದರು.

# ಸತತ ಪ್ರಯತ್ನವೇ ಸಾಧನೆಗೆ ದಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳು ಸಾಧನೆಗೆ ಸತತ ಪ್ರಯತ್ನ ಬೇಕು. ಮಕ್ಕಳು ಪ್ರಾಥಮಿಕ ಹಂತದಲ್ಲಿ ಸತತ ಪ್ರಯತ್ನಶೀಲರಾಗಬೇಕು. ಅಂದಾಗ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದು ಫಾತೀಮಾ ಖವಾಸ ಹೇಳಿದರು.

ಅವರು ಪಟ್ಟಣದ ಬಿ.ಎಂ.ಎಸ್. ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ಬದ್ರುನಿಸಾ ಯಳವತ್ತಿ ಗದಗ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದ ನಿಮಿತ್ತ ಗೌರವಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಉಮಾ ಬ್ಯಾಳಿ, ಆಸ್ಮಾ ಸೌದತ್ತಿ, ಪೂಜಾ ಮ್ಯಾಗೇರಿ, ಗೀತಾ ಕುಲಕರ್ಣಿ ಇದ್ದರು.

# ದಿ.24 ರಂದು ಕಿರಿಟಗೇರಿಯಲ್ಲಿ ಉಚಿತ ಆರೋಗ್ಯ ತಪಾಸಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಂತ್ರಾಲಯದ ರಾಘವೇಂದ್ರ ಸ್ವಾಮೀಜಿ ಅಪಮೃತ್ಯು ಪವಾಡ ನಡೆಸಿದ ಗದಗ ತಾಲೂಕ ಕಿರಿಟಗೇರಿ ಗ್ರಾಮದಲ್ಲಿ ದಿ.24 ರಂದು ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರ ಉಚಿತ ಆರೋಗ್ಯ ತಪಾಸಣೆ ಹಾಗೂ ಔಷಧಿ ವಿತರಣೆ ನಡೆಯಲಿದೆ.

ಹುಬ್ಬಳ್ಳಿಯ ಡಾ. ವಿ.ಜಿ.ನಾಡಗೌಡರ, ಡಾ.ಎಸ್. ಜಿ.ನಾಡಗೌಡರ ನೇತೃತ್ವದಲ್ಲಿ ವೈದ್ಯರ ತಂಡ ಆರೋಗ್ಯ ತಪಾಸಣೆ ನಡೆಸಲಿದೆ. ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಶಾಸಕ ಸಿ.ಸಿ.ಪಾಟೀಲ ಉದ್ಘಾಟಿಸುವರು. ಅತಿಥಿಗಳಾಗಿ ಗ್ರಾಪಂ ಅಧ್ಯಕ್ಷ ಟಿಪ್ಪುಸುಲ್ತಾನ ನದಾಫ್, ಉಪಾಧ್ಯಕ್ಷೆ ನೀಲವ್ವ ಕಡಿಯವರ ಪಾಲ್ಗೊಳ್ಳಲಿದ್ದಾರೆ.

ಉಚಿತ ಆರೋಗ್ಯ ಶಿಬಿರದ ಪ್ರಯೋಜನವನ್ನು ಕಿರಿಟಗೇರಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಪಡೆಯುವಂತೆ ಸಂಘಟಿಕರಾದ ನಂಜನಗೂಡು ರಾಘವೇಂದ್ರಸ್ವಾಮಿ ಮಠದ ಗೌರವ ವಿಭಾಗೀಯ ವ್ಯವಸ್ಥಾಪಕ ಎ.ಸಿ.ಗೋಪಾಲ, ಶ್ರೀನಿವಾಸ ಹುಬ್ಬಳ್ಳಿ ಕೋರಿದ್ದಾರೆ.

# ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವ ಮೂಲಕ ಅವರಲ್ಲಿ ಸಂಶೋಧನೆ ಕೈಗೊಳ್ಳುವಂತೆ ಪ್ರೇರೇಪಿಸಲು ಈ ವಿಜ್ಞಾನ ವಸ್ತು ಪ್ರದರ್ಶನ ಸಹಕಾರಿಯಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಅವರು ಮುಂಡರಗಿಯಲ್ಲಿ ಶ್ರೀ ಜಗದ್ಗುರು ಅನ್ನದಾನೇಶ್ವರ ವಿದ್ಯಾ ಸಮಿತಿಯ ಶತಮಾನೋತ್ಸವ ಸಮಾರಂಭದ ಅಂಗವಾಗಿ ಏರ್ಪಡಿಸಿದ್ದ ವಿಜ್ಞಾನ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ವಿಜ್ಞಾನ, ಗಣಿತ, ಹಾಗೂ ತಂತ್ರಜ್ಞಾನ ವಿಷಯಗಳ ಕಲಿಕೆಯಲ್ಲಿ ಆಸಕ್ತಿಯನ್ನು ಬೆಳೆಸುವುದು, ವಿದ್ಯಾರ್ಥಿಗಳಲ್ಲಿ ಚಿಂತಿಸುವ ಹೊಸದನ್ನು ಕಂಡುಹಿಡಿಯುವ ಹಾಗೂ ವಿಮರ್ಶಿಸುವ ಕೌಶಲ್ಯಗಳನ್ನು ಬೆಳೆಸುವಲ್ಲಿ ಇಂತಹ ವಿಜ್ಞಾನ ವಸ್ತು ಪ್ರದರ್ಶನಗಳಿಂದ ಸಾಧ್ಯವಾಗುತ್ತದೆ. ಶಾಲಾ ದಿನಗಳಲ್ಲಿಯೇ ಮಕ್ಕಳಲ್ಲಿ ವಿಜ್ಞಾನ ವಿಷಯಗಳಲ್ಲಿ ವಿಜ್ಞಾನ ಪ್ರಯೋಗ, ಕುತೂಹಲ, ಉತ್ಸಾಹ ಮತ್ತು ಅನ್ವೇಷಣೆಯನ್ನು ಕೈಗೊಳ್ಳುವತ್ತ ವಿದ್ಯಾರ್ಥಿಗಳ ಗಮನವನ್ನು ಸೆಳೆಯುವುದರಿಂದ ವಿಜ್ಞಾನ ವಸ್ತು ಪ್ರದರ್ಶನಗಳು ಮಕ್ಕಳಿಗೆ ನೆರವಾಗವಲ್ಲವು ಎಂದರಲ್ಲದೆ, ಅತ್ಯುತ್ತಮ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸಿದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿ ಮೆಚ್ಚುಗೆ ವ್ಯಕ್ತಪಡಿಸಿದರು.

50ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಪಾಲ್ಗೊಂಡು ಪ್ರಸ್ತುತ ಉಪಯುಕ್ತವಾಗುವ ಮೊಬೈಲ್, ಗ್ಯಾಸ್, ವಿದ್ಯುತ್, ನೀರಿನ ಬಳಕೆಗೆ ಸಂಬಂಧಿಸಿದ ಸರಳ ತಂತ್ರಜ್ಞಾನದ ಮಾಹಿತಿಯನ್ನು ಪ್ರದರ್ಶಿಸಿದರು. ಈ ಸಂದರ್ಭದಲ್ಲಿ ಡಾ. ಅನ್ನದಾನೇಶ್ವರ ಶ್ರೀಗಳು, ಶ್ರೀಮಠದ ಉತ್ತರಾಧಿಕಾರಿಗಳಾದ ಡಾ. ಮಲ್ಲಿಕಾರ್ಜುನ ಶ್ರೀಗಳು, ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ, ಮಾಜಿ ಸಚಿವ ಎಸ್. ಎಸ್. ಪಾಟೀಲ್, ಡಾ. ಬಸವರಾಜ ಧಾರವಾಡ, ಡಾ. ಬಿ.ಜಿ. ಜವಳಿ, ಕರಬಸಪ್ಪ ಹಂಚಿನಾಳ, ಎಸ್. ಎಂ. ಅಗಡಿ, ಎಸ್.ಎಸ್. ಗಡ್ಡದ, ಎಂ.ಎಚ್. ಪೂಜಾರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಅತ್ಯಾಧುನಿಕ ಇಂಟ್ರಾಓರಲ್ ಸ್ಕ್ಯಾನರ್ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರರದ ಹಾತಲಗೇರಿ ನಾಕಾ ಹತ್ತಿರವಿರುವ ಡಾ. ಹಿರೇಗೌಡರ ವಿಜಯಾ ದಂತ ಚಿಕಿತ್ಸೆ, ಆರ್ಥೋಡಾಂಟಿಕ್ ಸೆಂಟರ್‌ನಲ್ಲಿ ಜಗತ್ತಿನ ಅತ್ಯಾಧುನಿಕ ಹಾಗೂ ವೇಗವಾದ iTero Lumina Intraoral ಖಛಿಚಿಟಿಟಿಜಡಿ ಇತ್ತೀಚೆಗೆ ಲೋಕಾರ್ಪಣೆಗೊಂಡಿತು.

ಈ ನೂತನ ಯಂತ್ರವನ್ನು ಭಾರತೀಯ ವೈದ್ಯಕೀಯ ಸಂಘದ (IMA) ಅಧ್ಯಕ್ಷ ಡಾ. ಶ್ರೀಧರ್ ಕುರಡಗಿ ಉದ್ಘಾಟಿಸಿ ಮಾತನಾಡಿ, ͺಖಿಜಡಿಂ ಐಟಿಟುಟಿಚಿ ಇಂಟ್ರಾಓರಲ್ ಸ್ಕ್ಯಾನರ್ ದಂತ ಚಿಕಿತ್ಸೆಯಲ್ಲಿ ಕ್ರಾಂತಿಕಾರಿ ತಂತ್ರಜ್ಞಾನವಾಗಿದ್ದು, ಚಿಕಿತ್ಸಾ ವಿಧಾನವನ್ನು ಉತ್ಕೃಷ್ಟಗೊಳಿಸುತ್ತದೆ. ರೋಗಿಗಳಿಗೆ ಅಸೌಕರ್ಯ ಉಂಟುಮಾಡುವ ಮೌಲ್ಡ್‌ಗಳ ಬದಲು, ಈ ಡಿಜಿಟಲ್ ಸ್ಕ್ಯಾನರ್ ಮೂಲಕ ಕೆಲವೇ ಕ್ಷಣಗಳಲ್ಲಿ ಅತ್ಯಂತ ನಿಖರವಾದ 3ಆ ಚಿತ್ರಣವನ್ನು ಪಡೆಯಬಹುದು. ಜಿಲ್ಲೆಯ ದಂತ ಚಿಕಿತ್ಸಾ ಕ್ಷೇತ್ರದಲ್ಲಿ ಇದೊಂದು ಮಹತ್ವದ ಮೈಲಿಗಲ್ಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಡಾ. ರಾಹುಲ್ ಶಿರೋಳ , ಡಾ. ಜಗದೀಶ ಶಿರೋಳ, ಡಾ. ವಿ.ಸಿ. ಶಿರೋಳ, ಡಾ. ವಿಜಯಕುಮಾರ ಸಜ್ಜನರ, ಡಾ. ಪವನ್ ಪಾಟೀಲ, ಡಾ. ವೀರೇಶ್ ಹಂಚಿನಾಳ, ಡಾ. ಪಲ್ಲೇದ, ಡಾ. ಸಿದ್ದಾರ್ಥ್ ಗೌಡರ, ಡಾ. ಮಹಾಂತೇಶ ಪಾಟೀಲ, ಡಾ. ಬಿಡಿನಹಾಳ, ಡಾ. ಮರಗಿ, ಡಾ. ಆರ್.ಟಿ. ಪಾಟೀಲ, ಮುಕುಂದ ಪೋತ್ನಿಸ್ ಮುಂತಾದವರು ಉಪಸ್ಥಿತರಿದ್ದರು. ಡಾ. ನವೀನ್ ಹಿರೇಗೌಡರ ಕಾರ್ಯಕ್ರಮ ನಿರೂಪಿಸಿದರು. ಡಾ. ಅರ್ಪಿತಾ ಹಿರೇಗೌಡರ ಹಾಗೂ ಡಾ. ಸಿ.ಬಿ. ಹಿರೇಗೌಡರ ವಂದಿಸಿದರು.

# ಆಕ್ಷೇಪಣೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕೇಂದ್ರ ಪುರಸ್ಕೃತ ಅಮೃತ್-2.0 ಯೋಜನೆಯ ಘಟಕವಾದ ಅಮೃತ್ ಮಿತ್ರ ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಉದ್ಯಾನವನ ನಿರ್ವಹಣೆ ಮತ್ತು ನೀರಿನ ಗುಣಮಟ್ಟತಾ ಪರೀಕ್ಷೆಗೆ ಮಹಿಳಾ ಸ್ವ-ಸಹಾಯ ಸಂಘವನ್ನು ಆಯ್ಕೆ ಮಾಡಲು ಸ್ವೀಕೃತವಾದ ಅರ್ಜಿಗಳಿಗೆ ಅಮೃತ್ ಮಿತ್ರ ಕಾರ್ಯಕ್ರಮದ ಮಾನದಂಡದ ಪ್ರಕಾರ ಮೌಲ್ಯಮಾಪನ ಕೈಗೊಳ್ಳಲಾಗಿದೆ. ಸದರಿ ಮೌಲ್ಯಮಾಪನಕ್ಕೆ ಏನಾದರೂ ಆಕ್ಷೇಪಣೆ ಇದ್ದಲ್ಲಿ 07 ದಿನದೊಳಗಾಗಿ ದಾಖಲೆ ಸಹಿತ ಲಿಖಿತವಾಗಿ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ್, ಮುಳಗುಂದ ಇವರಿಗೆ ಸಲ್ಲಿಸಬಹುದಾಗಿದೆ.

ತಾತ್ಕಾಲಿಕ ಆಯ್ಕೆಯಾದ ಮಹಿಳಾ ಸ್ವ-ಸಹಾಯ ಸಂಘದ ವಿವರಗಳನ್ನು ನಿಗಧಿತ ಅನುಬಂಧದಲ್ಲಿ ದಾಖಲಿಸಿ ಸಾರ್ವಜನಿಕರ ಆಕ್ಷೇಪಣೆಗೆ ಪಟ್ಟಣ ಪಂಚಾಯತಿಯ ಸೂಚನಾ ಫಲಕಕ್ಕೆ ಲಗತ್ತಿಸಲಾಗಿದೆ.




ಗದಗ ತಾಲೂಕಿನ ನೀಲಗುಂದ ಉಪಜಲಾನಯನ ಪ್ರದಶದಲ್ಲಿ ಅನುಷ್ಠಾನವಾಗಿರುವ ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನಾ ಪ್ರದೇಶಕ್ಕೆ ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಜಂಟಿ ಕಾರ್ಯದರ್ಶಿ ಸಿ. ಶಿಖಾ ಅವರು ಭೇಟಿ ನೀಡಿ ಪರಿಶೀಲಿಸಿದರು. ಯೋಜನೆಯ ಫಲಾನುಭವಿ ಸಿಕಂದರ್ ಜಾನಕಾನ್ ಅವರ ಹೊಲದಲ್ಲಿ ಅಳವಡಿಸಿರುವ ಸಮಗ್ರ ಕೃಷಿ ಪದ್ಧತಿಯನ್ನು ವೀಕ್ಷಿಸಿ, ರೈತರೊಂದಿಗೆ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು, ರೈತ ಸಂಘದ ಮುಖ್ಯಸ್ಥರು ಹಾಜರಿದ್ದರು.

**ಹನಿ ನೀರಾವರಿ ಅಡಿಯಲ್ಲಿ ಬೆಳೆದ ಮೆಕ್ಸಿಕನ್ ಬಿನ್ಸ್ ಬೆಳೆಗಾರರ ಕಾರ್ಯಾಗಾರ, ಕ್ಷೇತ್ರ ಭೇಟಿ**

# ಹನಿ ನೀರಾವರಿ ಯೋಜನೆಗಳು ರೈತರಿಗೆ ದಾರಿದೀಪ



ನೆಟಾಫಿಮ್‌ನ ಡೆಪ್ಯೂಟಿ ಜನರಲ್ ಮ್ಯಾನೇಜರ್ ಗಿರೀಶ್ ದೇಶಪಾಂಡೆ ಮಾತನಾಡಿ, ಮೆಕ್ಸಿಕನ್ ಬಿನ್ಸ್ ಕಡಿಮೆ ಅವಧಿಯಲ್ಲಿ ಬೆಳೆಯುವ ದ್ವಿದಳ ಧಾನ್ಯವಾಗಿದ್ದು, ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಹನಿ ನೀರಾವರಿಯ ಮೂಲಕ ಬೆಳೆಯಬಹುದು. ಉತ್ತಮ ಉತ್ಪಾದನೆಗೆ ನೀರು, ಗೊಬ್ಬರ ಹಾಗೂ ಕೀಟ ನಿರ್ವಹಣೆ ಪ್ರಮುಖವಾಗಿದೆ ಎಂದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡದ ನೆಲ ಮತ್ತು ಜಲ ನಿರ್ವಹಣೆ ಸಂಸ್ಥೆ, ಕರ್ನಾಟಕ ನೀರಾವರಿ ನಿಗಮ ನಿಯಮಿತ ಮತ್ತು ನೆಟಾಫಿಮ್-ಎಂ.ಇ.ಐ.ಎಲ್ ಇವರ ಸಹಯೋಗದಲ್ಲಿ ಹನಿ ನೀರಾವರಿ ಪದ್ಧತಿಯಲ್ಲಿ ಬೆಳೆದ ಮೆಕ್ಸಿಕನ್ ಬೀನ್ಸ್ ಬೆಳೆಗಾರರ ಕಾರ್ಯಾಗಾರವನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ವಾಲ್ಮೀ ಸಂಸ್ಥೆಯ ನಿರ್ದೇಶಕರಾದ ಡಾ. ಗಿರೀಶ ಮರಡಿ ಮಾತನಾಡಿ, ಸುಸ್ಥಿರ ಕೃಷಿಗಾಗಿ ರೈತರು ಪಶು ಸಂಗೋಪನೆ, ಅರಣ್ಯ ಕೃಷಿ, ಕೊಯ್ಲೋತ್ತರ ನಿರ್ವಹಣೆ ಹಾಗೂ ಮೌಲ್ಯವರ್ಧನೆಗೆ ಹೆಚ್ಚಿನ ಒತ್ತು ನೀಡಬೇಕು. ಜೊತೆಗೆ ನೀರು ಮತ್ತು ಭೂಮಿ ಸಂರಕ್ಷಣೆ ರೈತರ ಕರ್ತವ್ಯವಾಗಿದ್ದು, ಹನಿ ನೀರಾವರಿ ಯೋಜನೆಗಳು ರೈತರಿಗೆ ದಾರಿದೀಪವಾಗಿವೆ. ಅವುಗಳನ್ನು ಸದುಪಯೋಗಪಡಿಸಿಕೊಳ್ಳುವ ಜೊತೆಗೆ ಮಣ್ಣು ಪರೀಕ್ಷೆಯ ಮಹತ್ವವನ್ನು ರೈತರು ಅರಿಯಬೇಕೆಂದು ಹೇಳಿದರು.

ಕರ್ನಾಟಕ ನೀರಾವರಿ ನಿಗಮ ನಿಯಮಿತದ ಮುಂಡರಗಿ ಕಾರ್ಯನಿರ್ವಹಣಾ ಅಭಿಯಂತರ ಐ. ಪ್ರಕಾಶ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸರ್ಕಾರದ ಮಹತ್ವಾಕಾಂಕ್ಷಿ ನೀರಾವರಿ ಯೋಜನೆಗಳಾದ ಸಿಂಗಟಾಲೂರು ಹನಿ ನೀರಾವರಿ ಯೋಜನೆಗಳು ಆಧುನಿಕ ಕೃಷಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ರೈತರ ಹೊಲಗಳಲ್ಲಿ ಅಳವಡಿಸಿರುವ ಹನಿ ನೀರಾವರಿ ಸಲಕರಣೆಗಳನ್ನು ರಕ್ಷಿಸಿ ಸರಿಯಾಗಿ ಬಳಸುವುದು ರೈತರ ಜವಾಬ್ದಾರಿಯಾಗಿದೆ. ಯೋಜನೆಯ ಫಲಾನುಭವಿ ರೈತರು ಹನಿ ನೀರಾವರಿಗೆ ಸೂಕ್ತವಾದ ಬೆಳೆಗಳನ್ನು ಬೆಳೆಯುವ ಮೂಲಕ ಹೆಚ್ಚಿನ ಲಾಭ ಪಡೆಯಬೇಕೆಂದು ಸಲಹೆ ನೀಡಿದರು.

ಯೋಜನಾ ಪ್ರದೇಶದಲ್ಲಿ ಹೆಚ್ಚಿನ ರೈತರು ಹನಿ ನೀರಾವರಿಯಲ್ಲಿ ಮೆಕ್ಸಿಕನ್ ಬಿನ್ಸ್ ಬೆಳೆಯುತ್ತಿದ್ದು, ಇದರ ಲಾಭದ ಪ್ರಮಾಣವು ಮೆಕ್ಕೆಜೋಳ ಹಾಗೂ ಹೆಸರು ಬೆಳೆಗಳಿಗಿಂತ ಹೆಚ್ಚಾಗಿದೆ. ಸದ್ಯ ಈ ಕಾಳುಗಳನ್ನು ಕ್ಯಾಲಿಫೋರ್ನಿಯ ಬುರಿಟೋ ಹೋಟೆಲ್‌ಗಳಲ್ಲಿ ಆಹಾರ ಪದಾರ್ಥಗಳ ತಯಾರಿಕೆಗೆ ಬಳಸಲಾಗುತ್ತಿದ್ದು, ವರ್ಷಕ್ಕೆ ಸುಮಾರು 400 ಟನ್ ಬೇಡಿಕೆಯಿದೆ. ಈ ಹಿನ್ನೆಲೆಯಲ್ಲಿ ಯೋಜನಾ ಪ್ರದೇಶದ ರೈತರು ಹೆಚ್ಚಿನ ಪ್ರಮಾಣದಲ್ಲಿ ಈ ಬೆಳೆಯನ್ನು ಬೆಳೆಸಿ ಲಾಭ ಪಡೆಯಬೇಕೆಂದು

ಬೆಳೆಯ ಸಂಪೂರ್ಣ ಮಾಹಿತಿಯನ್ನು ನೇಟಾಫಿಮ್‌ನ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಉಮೇಶ್ ರೈತರೊಂದಿಗೆ ಹಂಚಿಕೊಂಡರು. ನಂತರ ಲಕ್ಕುಂಡಿ ಗ್ರಾಮದಲ್ಲಿ ಹನಿ ನೀರಾವರಿ ಅಡಿಯಲ್ಲಿ ಬೆಳೆದ ಮೆಕ್ಸಿಕನ್ ಬೀನ್ಸ್ ಹೊಲಗಳಿಗೆ ಕ್ಷೇತ್ರ ಭೇಟಿ ನೀಡಿ ರೈತರು ಹೆಚ್ಚಿನ ಪ್ರಾಯೋಗಿಕ ಜ್ಞಾನವನ್ನು ಪಡೆದರು.

ಆನಂದ ಆಲೂರು ಕಾರ್ಯಕ್ರಮ ನಿರ್ವಹಿಸಿದರು. ಅತಿಥಿಗಳಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ ಜಾಲನ್ನವರ, ಸಹಾಯಕ ಅಭಿಯಂತರ ಬಸವರಾಜ್ ಕಡೆಮನಿ, ಕೆವಿಕೆ ಮುಖ್ಯಸ್ಥೆ ಸುಧಾ ಮಂಕಣಿ, ಅಗ್ರಿ ಗೋಪ್ರೋಪಿಟರ್, ರಾಹುಲ್ ರಾಜನ್, ಗುಂಡೂರಾವ ಕುಲಕರ್ಣಿ, ರವಿರಾಜಗೌಡ ಪಾಟೀಲ್, ಪ್ರಮೋದ ನಾಯ್ಕರ, ರೈತರಾದ ಸುರೇಶ ಕವಲೂರ ಹಾಗೂ ಯೋಜನಾ ಫಲಾನುಭವಿ ರೈತರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka